# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 165 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 18–01–2025 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 165 | RNI No: KARKAN/2023/88462 | KA/SK/CTA-874/2024-2026 | Chitradurga | Date: 18-01-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದುರ್ಗದ ಯುವ ಪ್ರತಿಭೆ ರಘುರಾಮ್ ಬೆಳ್ಳಿ ತೆರೆಗೆ ಎಂಟ್ರಿ 2

ಸಿರಿಧಾನ್ಯ ಹಬ್ ನಿರ್ಮಾಣಕ್ಕೆ ಶೀಘ್ರ ಭೂಮಿ ಪೂಜೆ:ಚಲುವರಾಯಸ್ವಾಮಿ 3

ರಾಜೀವ್ ಆರೋಗ್ಯ ವಿಜ್ಞಾನ ವಿವಿಯ ಪ್ರಾದೇಶಿಕ ಕಚೇರಿಗೆ ಸಿಎಂ ಶಂಕುಸ್ಥಾಪನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಗ್ರಂಥಾಲಯ ವಿಜ್ಞಾನ ತರಬೇತಿ: ಜ.31 ರವರೆಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ನಡೆಸುತ್ತಿರುವ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲಾ ಪ್ರವೇಶಾತಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಜನವರಿ 31 ರವರೆಗೆ ವಿಸ್ತರಿಸಲಾಗಿದೆ. ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಡಿಯಲ್ಲಿ ರಾಜ್ಯದ ನಾಲ್ಕು ಕಂದಾಯ ವಿಭಾಗಗಳಾದ ಬೆಂಗಳೂರು, ಮಂಗಳೂರು, ಧಾರವಾಡ ಮತ್ತು ಕಲಬುರಗಿ ಕೇಂದ್ರಗಳಲ್ಲಿ ಆರು ತಿಂಗಳ ಅವಧಿಯ ಗ್ರಂಥಾಲಯ ವಿಜ್ಞಾನ ತರಬೇತಿ ಶಾಲಾ ಪ್ರವೇಶಾತಿ ಹಮ್ಮಿಕೊಂಡಿದ್ದು, ಈ ತರಬೇತಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಜನವರಿ 31 ರವರೆಗೆ ವಿಸ್ತರಿಸಲಾಗಿದೆ ಎಂದು ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯ ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ್ ತಿಳಿಸಿದ್ದಾರೆ.

### ಜ.19 ಮತ್ತು 25ರಂದು ಸ್ಪರ್ಧಾತ್ಮಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

» ಚಿತ್ರದುರ್ಗ

ಇದೇ ಜ.19 ಮತ್ತು 25ರಂದು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಗ್ರೂಪ್–ಬಿ ಉಳಿಕೆ ಮೂಲ ವೃಂದದಲ್ಲಿನ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದ್ದು, ಪರೀಕ್ಷೆ ನಡೆಯುವ ದಿನದಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಪರೀಕ್ಷೆಯು ಚಿತ್ರದುರ್ಗ ನಗರದ 21 ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿನ ಅವ್ಯವಹಾರ ತಡೆಗಟ್ಟಲು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಸಿ.ಆರ್.ಪಿ.ಸಿ. ಕಲಂ 144ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯಲ್ಲಿನ ಜೆರಾಕ್ಸ್ ಅಂಗಡಿ ಮತ್ತು ಕಂಪ್ಯೂಟರ್ ಇಂಟರ್‌ನೆಟ್ ಕೇಂದ್ರಗಳನ್ನು ಜ.19 ಮತ್ತು 25ರಂದು ಬೆಳಿಗ್ಗೆ 9 ರಿಂದ ಸಂಜೆ 5 ರವರಗೆ ಮುಚ್ಚುವಂತೆ ಮತ್ತು ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಯು ಯಾವುದೇ ಕಾರಣಕ್ಕೂ ಮೊಬೈಲ್ ಫೋನ್ ಮತ್ತು ಎಲೆಕ್ಟ್ರಾನಿಕ್ ಉಪಕರಣಗಳನ್ನು ತರದಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

### ಮಟ್ಕಾಚೀಟಿ ಬರೆಯುತ್ತಿದ್ದ ಆಟೋಚಾಲಕ ವಶ

» ಚಳ್ಳಕೆರೆ

ಶಾಂತಿನಗರದ ಶಾದಿಮಹಲ್‌ನ ಸಾರ್ವಜನಿಕ ರಸ್ತೆಯಲ್ಲಿ ವೀರದಿಮ್ಮನಹಳ್ಳಿಯ ಆಟೋ ಚಾಲಕ ಕುಮಾರ್‌ನಾಯ್ಕ(45) ಎಂಬ ವ್ಯಕ್ತಿ ಸಾರ್ವಜನಿಕರಿಂದ ಮಟ್ಕಾ ಚೀಟಿ ಹಣವನ್ನು ಪಣವಾಗಿ ಕಟ್ಟಿಸಿಕೊಳ್ಳುತ್ತಿದ್ದ ಸಂದರ್ಭದಲ್ಲಿ ದಾಳಿನಡೆಸಿ ಆತನನ್ನು ವಶಕ್ಕೆ ಪಡೆಯಲಾಗಿದೆ. ಸಾರ್ವಜನಿಕ ಮಾಹಿತಿ ಮೇರೆಗೆ ಎಎಸ್‌ಐ ರೇಣುಕಮ್ಮ ಮತ್ತು ಸಿಬ್ಬಂದಿ ವರ್ಗ ದಾಳಿ ನಡೆಸಿ ಮಟ್ಕಾ ಹಣ 1050ರೂವನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

### ರೈತರಿಗೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ, ಆಧುನಿಕ ಹೈನುಗಾರಿಕೆ, ತರಬೇತಿ ಆಯೋಜಿಸಲಾಗಿದೆ. ಜ.20 ಮತ್ತು 21 ರಂದು ಕುರಿ ಮತ್ತು ಮೇಕೆ ಸಾಕಾಣಿಕೆ, 30 ಮತ್ತು 31 ರಂದು ಆಧುನಿಕ ಹೈನುಗಾರಿಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಿದ್ದು, ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ.

## ಸಚಿವ ಮತ್ತು ಶಾಸಕರ ನಡುವೆ ಶಮನವಾಗದ ಮುನಿಸು!

# ವಿವಿಎಸ್ ಬಾಗಿನ ಕಾರ್ಯಕ್ರಮ ಮುಂದಕ್ಕೆ

» ಪಿ.ಟಿ. ಸಿದ್ದೇಶ್ ಲಕ್ಕಿಹಳ್ಳಿ

ಹೊಸದುರ್ಗ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷ ಪೂರ್ಣವಾಗುವ ಮೊದಲೇ ಚಿತ್ರದುರ್ಗ ಜಿಲ್ಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮತ್ತು ಜಿಲ್ಲೆಯ ಕೆಲ ಕಾಂಗ್ರೆಸ್ ಶಾಸಕರ ಮಧ್ಯೆ ವಿವಿಧ ವಿಚಾರಗಳಿಗೆ ಸಂಘರ್ಷ ಏರ್ಪಟ್ಟಿದೆ ಎಂಬ ಮಾತುಗಳು ಕೇಳಿಬಂದಿದ್ದವು.



ಆದ'ರೀದಿಗ', ಸಚಿವರು ಮತ್ತು ಶಾಸಕರ ನಡುವಿನ ಒಳ ಜಗಳದ ಬೇಗುದಿ ವಿವಿ ಸಾಗರ ಜಲಾಶಯದ ವಿಚಾರವಾಗಿ ಬಹಿರಂಗಗೊಂಡಿದೆ.

ಇತ್ತೀಚೆಗೆ, ಪತ್ರಿಕಾಗೋಷ್ಠಿ ನಡೆಸಿದ್ದ ಹೊಸದುರ್ಗ ಕ್ಷೇತ್ರದ ಶಾಸಕ ಬಿ.ಜಿ. ಗೋವಿಂದಪ್ಪ 'ಜಿಲ್ಲಾ ಉಸ್ತುವಾರಿ ಸಚಿವರಾಗಿರುವ ಡಿ. ಸುಧಾಕರ್ ತಮ್ಮ ಕೆಲಸಗಳನ್ನು ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ. ಜಿಲ್ಲೆಯ ಉಸ್ತುವರಿ ವಹಿಸಿಕೊಂಡಿರುವವರು, ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಶ್ರಮಿಸಬೇಕೆ ವಿನಃ ಒಂದು ತಾಲೂಕಿಗೆ ಸೀಮಿತವಾದರೆ ಹೇಗೆ? ಅವರ ಕರ್ತವ್ಯ ಮತ್ತು ಜವಾಬ್ದಾರಿಗಳನ್ನು ನೆನಪಿಸಿ ಕೊಳ್ಳಬೇಕಾದ ಸಂದರ್ಭ ಸೃಷ್ಟಿಯಾಗಿದೆ ಎಂದು ಬಹಿರಂಗವಾಗಿಯೇ ಬೇಸರ ವ್ಯಕ್ತಪಡಿಸಿದ್ದರು. ಜಿಲ್ಲಾ ಡಿಸಿಸಿ ಬ್ಯಾಂಕ್ ಗೆ ಸಚಿವ ಸುಧಾಕರ್ ಅವರೇ ಇದೀಗ ಅಧ್ಯಕ್ಷರಿದ್ದಾರೆ. ಬ್ಯಾಂಕ್ ಚುನಾವಣೆಯ ಸಂದರ್ಭದಲ್ಲಿ ಸಚಿವ ಮತ್ತು ಶಾಸಕರ ನಡುವೆ ಸಣ್ಣದಾಗಿ ವೈಮನಸ್ಸು ಮೂಡಿತ್ತು. ಹೊಸದುರ್ಗದ ಶಾಸಕ ಗೋವಿಂದಪ್ಪ ಮಾತ್ರವಲ್ಲದೇ, ಇತರ ಶಾಸಕರು ಕೂಡ ಬೇಸರಗೊಂಡಿದ್ದರು. ಅಲ್ಲದೇ ವಿವಿ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸುವ ಕಾರ್ಯಕ್ರಮದ ವಿಚಾರವಾಗಿ ಸಚಿವರು ಜಿಲ್ಲೆಯ ಯಾವುದೇ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ, ತಮ್ಮ ಸ್ವ–ನಿರ್ಧಾರದಿಂದ ಇದೇ ತಿಂಗಳ ಜನವರಿ 18 ರ ಶನಿವಾರದಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ರವರನ್ನು ಕರೆಸಿ, ಕಾರ್ಯಕ್ರಮ ಆಯೋಜಿಸುವ ಸಿದ್ಧತೆ ನಡೆಸಿದ್ದರಿಂದ ಶಾಸಕರು ಮತ್ತಷ್ಟು ಕೆರಳಿದ್ದಾರೆ. ಹಾಗಾಗಿಯೇ, ಬಾಗಿನ ಅರ್ಪಿಸುವ ಕಾರ್ಯಕ್ರಮ ಮುಂದಕ್ಕೆ ಹೋಗಿದೆ ಎಂದು ಸಾರ್ವಜನಿಕ ವಲಯಗಳಲ್ಲಿ ಚರ್ಚೆಯಾಗುತ್ತಿದೆ.

ವಾಣಿವಿಲಾಸ ಸಾಗರ ಜಲಾಶಯ ಮೂರನೇ ಬಾರಿಗೆ ಕೋಡಿ ಬಿದ್ದು ಐತಿಹಾಸಿಕ ದಾಖಲೆ ನಿರ್ಮಾಣವಾಗಿದೆ. ಡ್ಯಾಂ ಭರ್ತಿಯಾಗಿರುವ ವಿಷಯ ಕೆಲವರಿಗೆ ಸಂತಸ ನೀಡಿದರೆ, ಜಲಾಶಯದ ಹಿನ್ನೀರಿನ ಭಾಗದ ರೈತರಿಗೆ ಸಂಕಟ ತಂದೊಡ್ಡಿದೆ. 2022 ರಲ್ಲಿ ಜಲಾಶಯ 2ನೇ ಬಾರಿಗೆ ಕೋಡಿ ಬಿದ್ದಾಗ ನೀರಿನ ಮಟ್ಟ 135 ಅಡಿಗೆ ತಲುಪಿತ್ತು. ಇದರಿಂದಾಗಿ, ಹಿನ್ನೀರಿನ ಬಹಳಷ್ಟು ಗ್ರಾಮಗಳ ಜನರು ಮನೆಗಳು ಮತ್ತು ತಮ್ಮ ಜಮೀನುಗಳನ್ನು ಕಳೆದುಕೊಂಡು ಗಂಜಿ ಕೇಂದ್ರಗಳನ್ನು ಸೇರಿದ್ದರು. ಮತ್ತೊಮ್ಮೆ 3ನೇ ಬಾರಿಗೆ ಡ್ಯಾಂ ಕೋಡಿ ಬಿದ್ದಿದ್ದು, ಹೊಸದುರ್ಗ ತಾಲೂಕಿನ ಕೆಲ ಗ್ರಾಮಗಳ ಜನರು 2022 ರಲ್ಲಿ ಅನುಭವಿಸಿದ ಪ'ರಿಸ್ಥಿತಿಂ'ುನ್ನ್ೀ ಅನುಭವಿಸುವಂತಾಗಿದೆ. ಜಲಾಶಯದಹಿನ್ನೀರಿನಿಂದ ಹೊಸದುರ್ಗದ ಜನರು ಎಷ್ಟೇ ಸಮಸ್ಯೆಗಳನ್ನು ಎದುರಿಸುತ್ತಿದ್ದರು, ಜಿಲ್ಲಾ ಉಸ್ತುವಾರಿ ಸಚಿವರು ಮಾತ್ರ ಕಂಡರು ಕಾಣದಂತಿದ್ದಾರೆ. ಸಚಿವರ ನಡೆಯಿಂದ ಬಹಳಷ್ಟು ಬೇಸರವಾಗಿದೆ ಎಂದು ಶಾಸಕ ಗೋವಿಂದಪ್ಪ ಸಿಡಿಮಿಡಿಗೊಂಡಿದ್ದರು.

ವಾಣಿವಿಲಾಸ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಲು ಇದೇ ಜನವರಿ ತಿಂಗಳ 23ರಂದುಮಧ್ಯಾಹ್ನ3ಗಂಟೆಗೆಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮ್ಮತಿ ಸೂಚಿಸಿದ್ದಾರೆ. ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸೂಕ್ತ ತಯಾರಿ ಮಾಡಿಕೊಳ್ಳುವಂತೆ ಉಪ ಮುಖ್ಯಮಂತ್ರಿಯವರ ಹೆಚ್ಚುವರಿ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ. ಬಾಗಿನ ಅರ್ಪಿಸುವ ಕಾರ್ಯಕ್ರಮದ ಅಧ್ಯಕ್ಷತೆಯನ್ನ ಹಿರಿಯೂರಿನ ಶಾಸಕ ಡಿ. ಸುಧಾಕರ್ ವಹಿಸಿಕೊಳ್ಳುವರೋ? ಹೊಸದುರ್ಗದ ಶಾಸಕ ಬಿ.ಜಿ. ಗೋವಿಂದಪ್ಪನವರು ವಹಿಸಿಕೊಳ್ಳುವರೋ? ಡಿ.ಸುಧಾಕರ್ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆದರೆ, ಜಿಲ್ಲಾ ಉಸ್ತುವಾರಿ ಸಚಿವರ ಮೇಲಿನ ವೈಮನಸ್ಸು ಮರೆತು ಶಾಸಕ ಗೋವಿಂದಪ್ಪ ಹಾಗೂ ಜಿಲ್ಲೆಯ ಇತರ ಶಾಸಕರು ಪಾಲ್ಗೊಳ್ಳುವರೇ? ಅಥವಾ ಗೈರಾಗುವರೆ ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಬಹಳ ಜೋರಾಗಿಯೇ ಚರ್ಚೆಯಾಗುತ್ತಿವೆ.



ನಮ್ಮ ಜನ ವಿಶೇಷ



ವಿವಿ ಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸುವ ವಿಚಾರವಾಗಿ ನಾನು ಯಾವುದೇ ಮಾತನಾಡುವುದಿಲ್ಲ. ಮಾಜಿ ಶಾಸಕ ಗೂಳಿಹಟ್ಟಿ ಶೇಖರ್ ಅವರು ಅವರ ಅಭಿಪ್ರಾಯ ಹೇಳಿದ್ದಾರೆ. ಅವರ ಹೇಳಿಕೆಯೇ ಬೇರೆ, ನನ್ನ ಹೇಳಿಕೆಯೇ ಬೇರೆ. ಅವರ ಹೇಳಿಕೆಗೂ ನನ್ನ ಹೇಳಿಕೆಗೂ ಸಂಬಂಧವಿಲ್ಲ.

» ಬಿ.ಜಿ.ಗೋವಿಂದಪ್ಪ, ಶಾಸಕ

ನಾನು ಶಾಸಕನಾಗಿದ್ದಾಗ ವಾಣಿವಿಲಾಸ ಸಾಗರ ಜಲಾಶಯದ ವಿಚಾರವನ್ನು ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ್ದೆ. ಆಗ ಸರ್ಕಾರ ಸರ್ವೆ ನಡೆಸಿ, ನೀರು ಆವರಿಸಿಕೊಂಡಿರುವ 28.ಸಾವಿರ ಹೆಕ್ಟೇರ್ ಭೂಮಿ, ಅಣೆಕಟ್ಟು ಮತ್ತು ಕಣಿವೆ ಮಾರಮ್ಮ ದೇವಿ ದೇವಾಲಯವರೆಗೂ ಹೊಸದುರ್ಗ ತಾಲೂಕಿನ ವ್ಯಾಪ್ತಿಗೆ ಸೇರಿದೆ ಎಂದು ಅಧಿಕೃತವಾಗಿ ಅನುಮೋದನೆ ಹೊರಡಿಸಿತ್ತು. ಜಲಾಶಯ ಹೊಸದುರ್ಗಕ್ಕೆ ಸೇರಿದ್ದು ಎಂದು ಹೇಳಲು ಅಧಿಕಾರಿಗಳು ಕೂಡ ಹಿಂಜರಿಯುತ್ತಿದ್ದಾರೆ. ಹಿಂದಿನ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಜಲಾಶಯಕ್ಕೆ ಬಾಗಿನ ಅರ್ಪಿಸಲು ಬಂದಾಗ, ನಮ್ಮ ಸ್ವಾಭಿಮಾನಕ್ಕೆ ಧಕ್ಕೆಯಾಗಿದ್ದರಿಂದ ಕಾರ್ಯಕ್ರಮಕ್ಕೆ ಹೋಗಿರಲಿಲ್ಲ. ಈಗಿನ ಶಾಸಕರಾಗಿರುವ ಗೋವಿಂದಪ್ಪನವರು ಸಿಎಂ ಮತ್ತು ಡಿಸಿಎಂ ಬಳಿ ಒಳ್ಳೆಯ ವಿಶ್ವಾಸವನ್ನಿಟ್ಟುಕೊಂಡಿದ್ದಾರೆ. ಅವರಿಗೆ ಮನವಿ ಮಾಡಿ, ಒತ್ತಡ ಹಾಕಿ ವಿವಿ ಸಾಗರ ಜಲಾಶಯದಿಂದ ಹೊಸದುರ್ಗದ ಜನರ ನೀರಿನ ಪಾಲನ್ನು ಪಡೆಯಲಿ.

» ಗೂಳಿಹಟ್ಟಿ ಶೇಖರ್. ಮಾಜಿ ಸಚಿವ

ವಿವಿ ಸಾಗರ ಜಲಾಶಯ ಸಂಪೂರ್ಣವಾಗಿ ಹೊಸದುರ್ಗ ತಾಲ್ಲೂಕಿನ ವ್ಯಾಪ್ತಿಯಲ್ಲಿಯೇ ಇದ್ದು, ಈ ವ್ಯಾಪ್ತಿಯಲ್ಲಿ ನಡೆಯುವ ಕಾರ್ಯಕ್ರಮಗಳು ಹೊಸದುರ್ಗದ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿಯೇ ನಡೆಯಬೇಕು. ಹಿರಿಯೂರಿನ ಅಧ್ಯಕ್ಷರಿಗೆ ಇಲ್ಲಿ ನಡೆಯುವ ಕಾರ್ಯಕ್ರಮಗಳ ಅಧ್ಯಕ್ಷತೆ ನೀಡಿದರೆ, ಹೋರಾಟ ನಡೆಸಬೇಕಾಗುತ್ತದೆ. ಮೂರನೇ ಬಾರಿಗೆ ಜಲಾಶಯ ಕೋಡಿ ಬಿದ್ದಿದ್ದು, ಬಾಗಿನ ಅರ್ಪಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಶಿವಕುಮಾರ್ ಬರುತ್ತಿರುವುದು ಸಂತಸದ ವಿಚಾರ. ಆದರೆ, ಬಾಗಿನ ಅರ್ಪಿಸುವ ಕಾರ್ಯಕ್ರಮದ ಅಧ್ಯಕ್ಷತೆಯನ್ನ ಹೊಸದುರ್ಗದ ಶಾಸಕರಾಗಿರುವ ಗೋವಿಂದಪ್ಪನವರಿಗೆಯೇ ನೀಡಬೇಕು.

» ಈಶ್ವರ್ ಕಾಡುಗೊಲ್ಲ. ಚಿತ್ತಯ್ಯನಹಟ್ಟಿ ಗ್ರಾಮದ ರೈತ.

## ಪ್ರಮುಖ ಸುದ್ದಿ

# ಸರ್ಕಾರದಲ್ಲಿ ಭಿನ್ನಾಭಿಪ್ರಾಯವಿಲ್ಲ: ಚೆಲುವರಾಯ ಸ್ವಾಮಿ

» ಹೊಸದುರ್ಗ

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಉಪಮುಖ್ಯಮಂತ್ರಿ ಸೇರಿದಂತೆ ಎಲ್ಲಾ ಸಚಿವರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸರ್ಕಾರ ಹಾಗೂ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದು ಕೃಷಿ ಸಚಿವ ಚೆಲುವನಾರಾಯಣ ಸ್ವಾಮಿ ಸ್ಪಷ್ಟನೆ ನೀಡಿದರು.

ಹೊಸದುರ್ಗದ ಮಲ್ಲಿಹಳ್ಳಿ ಗ್ರಾಮಕ್ಕೆ ಶುಕ್ರವಾರ ಭೇಟಿ ನೀಡಿ ಮಾತನಾಡಿದ ಅವರು,

ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲಾಗಿದೆ. ಹಿಂದಿನ ವರ್ಷಗಳಿಗೆ ಹೋಲಿಸಿದರೆ ಅಪರಾಧಗಳ ಸಂಖ್ಯೆ ಇಳಿಮುಖವಾಗಿದೆ. ಕೆಲ ಅಹಿತಕರ ಘಟನೆಗಳು ನಡೆದಿವೆ. ಸರ್ಕಾರ ಇವುಗಳನ್ನು ಗಂಭೀರವಾಗಿ ಪರಿಗಣಿಸಿದೆ.

ತಾಲ್ಲೂಕಿನ ರೈತರು ಕಡಿಮೆ ಮಳೆಯ ನಡುವೆ ಬರಿ ಇಬ್ಬನಿ ಆಧರಿಸಿ ವಾರ್ಷಿಕವಾಗಿ ಎರಡು ಬೆಳೆಗಳನ್ನು ರೈತರು ತೆಗೆಯುತ್ತಾರೆ. ಈ ಮೊದಲು ಸಿರಿಧಾನ್ಯಗಳಿಗೆ ಮಾರುಕಟ್ಟೆ ಇರಲಿಲ್ಲ. ಈಗ ಮಾರುಕಟ್ಟೆ ದೊರಕುತ್ತಿದೆ. ರಾಗಿ, ಭತ್ತ, ತೊಗರಿ ಮಾದರಿಯಲ್ಲಿ ಸಿರಿಧಾನ್ಯಗಳನ್ನು ಬೆಂಬಲ ಬೆಲೆಯಡಿ ಖರೀದಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದರು. ಜ.23 ರಿಂದ 25 ರವರೆಗೆ ಅಂತರಾಷ್ಟ್ರೀಯ ಸಾವಯವ ಸಿರಿಧಾನ್ಯ ಮೇಳ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಮೇಳ ಉದ್ಘಾಟಿಸುವರು. ದೇಶದ 25 ರಾಜ್ಯಗಳ ಕೃಷಿ ಮಂತ್ರಿಗಳು ಹಾಗೂ ಅಧಿಕಾರಿಗಳು, ರೈತರು ಭಾಗವಹಿಸುವರು. ಇದರೊಂದಿಗೆ ವಿವಿಧ ದೇಶಗಳ ಅಧಿಕಾರಿ ಹಾಗೂ ರೈತರು ಸಹ ಮೇಳದಲ್ಲಿ ಪಾಲ್ಗೊಳ್ಳುವರು. ಈ ಮೂಲಕ ಅಂತರಾಷ್ಟ್ರೀಯ ಮಟ್ಟದಲ್ಲೂ ಸಿರಿಧಾನ್ಯಗಳಿಗೆ ಮಾರುಕಟ್ಟೆ ದೊರಕಿಸಲು ಪ್ರಯತ್ನ ಮಾಡಲಾಗುವುದು ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದರು.



'ಶಾಸಕ ಗೊವಿಂದಪ್ಪನವರು ಸ್ವತಃ ಕೃಷಿಕರಾಗಿದ್ದು, ಸಿರಿಧಾನ್ಯ ಬೆಳೆಯುವುದರೊಂದಿಗೆ ಆಹಾರದಲ್ಲಿಯೂ ಸಿರಿಧಾನ್ಯ ಬಳಸುತ್ತಿದ್ದಾರೆ. ಈ ಮೂಲಕ ತಾಲ್ಲೂಕಿನ ರೈತರಿಗೆ ಮಾದರಿಯಾಗಿದ್ದಾರೆ. ಹೊಸದುರ್ಗ ಮಾದರಿಯಲ್ಲಿ ಮಳೆ ಕಡಿಮೆ ಬೀಳುವ ರಾಜ್ಯದ ಇತರೆ ಜಾಗದಲ್ಲಿ ಸಿರಿಧಾನ್ಯ ಬೆಳೆಯಲು ರೈತರಿಗೆ ಸರ್ಕಾರದಿಂದ ಪ್ರೋತ್ಸಾಹ ನೀಡಲಾಗುವುದು. ಅಂತರಾಷ್ಟ್ರೀಯ ಮೇಳದಲ್ಲಿ ಮುಖ್ಯಮಂತ್ರಿಗಳಿಂದ ಶಾಸಕ ಬಿ.ಜಿ.ಗೋವಿಂದಪ್ಪ ನವರಿಗೆ ಸನ್ಮಾನಿಸಲಾಗುವುದು ಎಂದರು.

ಮಹೇಶ್ ಹಾಗೂ ಪ್ರಭುಲಿಂಗಪ್ಪ ನವರ ಸಿರಿಧಾನ್ಯ ರೈತರ ಒಕ್ಕಲು ಕಣ ಹಾಗೂ ಕ್ಷೇತ್ರಕ್ಕೆ ಭೇಟಿ ನೀಡಿದ್ದೇನೆ. ರೈತ ಮಹೇಶ್ ಬೆಂಗಳೂರಿನಲ್ಲಿ ಖಾಸಗಿ ಕಂಪನಿಯಲ್ಲಿ ರೂ.12 ಸಾವಿರಕ್ಕೆ ದುಡಿಯುತ್ತಿದ್ದರು. ಖರ್ಚು ಕಳೆದು ತಿಂಗಳಿಗೆ ರೂ.4 ಸಾವಿವರ ಮಾತ್ರ ಉಳಿಯುತ್ತಿತ್ತು. ಈಗ ಮರಳಿ ಸಮಗ್ರ ಕೃಷಿ ಪದ್ದತಿಯಲ್ಲಿ ವಾರ್ಷಿಕವಾಗಿ ಎಲ್ಲಾ ಖರ್ಚು ಕಳೆದು ರೂ.4 ಲಕ್ಷ ಲಾಭ ಗಳಿಸುತ್ತಿದ್ದಾರೆ. ರೇಷ್ಮೆ, ಕೋಳಿ ಸಾಕಣಿಕೆ, ಸಿರಿ ಧಾನ್ಯಗಳನ್ನು ಬೆಳದು ರಾಜ್ಯದ ಇತರೆ ಯುವಕರಿಗೂ ಮಾದರಿಯಾಗಿದ್ದಾರೆ. ಇನ್ನೋರ್ವ ರೈತ ಪ್ರಭುಲಿಂಗಸ್ವಾಮಿ ಸಹ ಸಮಗ್ರ ಕೃಷಿ ಮಾಡುತ್ತಿದ್ದು, ಯಾವುದೇ ಸಾಲ ಹಾಗೂ ಬಡ್ಡಿಯ ಜಂಜಾಟವಿಲ್ಲದೇ ನೆಮ್ಮದಿಯ ಜೀವನ ನಡೆಸುತ್ತಿದ್ದಾರೆ. ಕೃಷಿ ಇಲಾಖೆ, ಕೃಷಿ ವಿಶ್ವ ವಿದ್ಯಾಲಯಗಳು ನೀಡುವ ಸಲಹೆಗಳನ್ನು ರೈತರು ಕೃಷಿಯಲ್ಲಿ ಅಳವಡಿಸಿಕೊಂಡರೆ ಜೀವನ ಸುಧಾರಿಸುವುದು ಎಂದು ಸಚಿವ ಚಲುವರಾಯಸ್ವಾಮಿ ಅಭಿಪ್ರಾಯ ಪಟ್ಟರು.

ಈ ಮೊದಲು ನವಣೆ ಅಕ್ಕಿ ಅನ್ನ ಉಣ್ಣುತ್ತಾರೆ ಎಂದರೆ, ಗ್ರಾಮೀಣ ಭಾಗದಲ್ಲಿ ಬಡವರು ಎಂದು ಭಾವಿಸಿ ಹೆಣ್ಣು ನೀಡುತ್ತಿರಲಿಲ್ಲ. ಇಂದು ಕಾಲ ಬದಲಾಗಿದೆ. ಸಿದ್ದರಾಮಯ್ಯನವರ ಅನ್ನಭಾಗ್ಯ ಯೋಜನೆಯ ಫಲವಾಗಿ ಬಡವರಿಗೂ ಅಕ್ಕಿ ಸಿಗುತ್ತಿದೆ ಎಂದು ಶಾಸಕ ಬಿ.ಜಿ.ಗೊವಿಂದಪ್ಪ ರೈತರೊಂದಿಗಿನ ಸಂವಾದದ ವೇಳೆ ಹೇಳಿದರು. ಪೌಷ್ಠಿಕ ಆಹಾರ ಎನಿಸಿದ ಸಿರಿಧಾನ್ಯಗಳು ನಮ್ಮ ಆಹಾರ ಪದ್ಧತಿಯಿಂದ ದೂರವಾಗುತ್ತಿವೆ. ವೈದ್ಯಲೋಕ ಸಿರಿಧಾನ್ಯಗಳ ಮಹತ್ವನ್ನು ಸಾಬೀತು ಮಾಡಿದೆ. ಇದರಿಂದಾಗಿ ಶ್ರೀಮಂತರು ಸಹ ಸಿರಿಧಾನ್ಯಗಳ ಆಹಾರ ಸೇವಿಸುತ್ತಿದ್ದಾರೆ. ಸಿರಿಧಾನ್ಯಗಳಿಗೆ ಉತ್ತಮ ಮಾರುಕಟ್ಟೆ ದೊರಕಿದರೆ ಹೆಚ್ಚು ರೈತರು ಸಿರಿಧಾನ್ಯ ಕೃಷಿ ಕಡೆಗೆ ಮುಖ ಮಾಡುವರು. ಹೊಸದುರ್ಗ ತಾಲ್ಲೂಕು ಮೊದಲಿನಿಂದಲೂ ಸಿರಿಧಾನ್ಯ ಕೃಷಿ ಹೆಸರಾಗಿದೆ. ಸದ್ಯ ಸಿರಿಧಾನ್ಯಗಳ ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಕೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು. ಈ ವೇಳೆ ಶಾಸಕ ಟಿ.ರಘುಮೂರ್ತಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಸೇರಿದಂತೆ ಸ್ಥಳೀಯ ಮುಖಂಡರು, ರೈತರು ಅಧಿಕಾರಿಗಳು ಉಪಸ್ಥಿತರಿದ್ದರ

## ಫಾಸ್ಟ್ ನ್ಯೂಸ್

### ಸರ್ಕಾರಿ ನೌಕರರು ಆಸ್ತಿ ವಿವರವನ್ನು ಘೋಷಿಸಿಕೊಳ್ಳಬೇಕು : ಕೆಆರ್‌ಎಸ್ ಪಕ್ಷ ಆಗ್ರಹ



» **ಚಳ್ಳಕೆರೆ**

ಸರ್ಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆಗಳ ಅಧಿಕಾರಿ, ನೌಕರರ ವರ್ಗ, ಲೋಕಾಯುಕ್ತ,ಉಪಲೋಕಾಯುಕ್ತರೂಸೇರಿದಂತೆ ತಮ್ಮ ಆಸ್ತಿ ವಿವರಗಳನ್ನು ಘೋಷಿಸಿಕೊಳ್ಳಬೇಕೆಂದು ಕರ್ನಾಟಕ ರಾಷ್ಟ್ರ ಸಮಿತಿಪಕ್ಷ ಆಗ್ರಹಿಸಿದೆ. ಇಲ್ಲಿನ ಪ್ರವಾಸಿಮಂದಿರದಲ್ಲಿ ರಾಜ್ಯ ಕಾರ್ಯನಿರ್ವಾಹಕ ಸದಸ್ಯ ನಗರಂಗೆರೆ ಸಿ.ಮಹೇಶ್ ಈ ಬಗ್ಗೆ ಮಾತನಾಡಿ, ಸರ್ಕಾರಿ ಸೇವೆಯಲ್ಲಿ ನಿರತರಾದವರು ಸಾರ್ವಜನಿಕರ ಹಿತದೃಷ್ಠಿಯಿಂದ ತಮ್ಮ ಆಸ್ತಿಗಳನ್ನು ಘೋಷಿಸಿಕೊಳ್ಳಬೇಕೆಂಬುವುದು ನಿಯಮವಿದೆ. ಆದರೆ, ಬಹುತೇಕ ಸರ್ಕಾರಿ ನೌಕರರ ಇದನ್ನು ನಿರ್ಲಕ್ಷಿಸುತ್ತಾ ಬಂದಿದ್ದಾರೆ. ಆದ್ದರಿಂದ ಸರ್ಕಾರಿ ನೌಕರರು ಈ ಕೂಡಲೇ ತಮ್ಮ ಆಸ್ತಿ ವಿವರವನ್ನು ಘೋಷಿಸಿಕೊಳ್ಳುವ ಮೂಲಕ ಎಲ್ಲರಿಗೂ ಮಾದರಿಯಾಗಬೇಕೆಂದು ತಿಳಿಸಿದರು. ಪತ್ರಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಕೆ.ಟಿ.ನಾಗರೆಡ್ಡಿ, ಪ್ರಧಾನ ಕಾರ್ಯದರ್ಶಿ ಮಣಿಮಠ, ಜಿಲ್ಲಾ ಯುವಘಟಕದ ಕಾರ್ಯದರ್ಶಿ ಜಬೀವುಲ್ಲಾ, ತಾಲ್ಲೂಕು ಕಾರ್ಯದರ್ಶಿ ಪಾಪಯ್ಯ ಮುಂತಾದವರು ಇದ್ದರು.

### ಗ್ರಾಹಕರ ಸಂವಾದ

» **ದಾವಣಗೆರೆ**

ನಗರ ಉಪ ವಿಭಾಗ-1ರ ವತಿಯಿಂದ ಜನವರಿ 18 ರಂದು ಮಧ್ಯಾಹ್ನ 3 ರಿಂದ ಸಂಜೆ 5.30 ರವರೆಗೆ ಗ್ರಾಹಕರ ಸಂವಾದ ಕಾರ್ಯಕ್ರಮವನ್ನು ನಗರ ಉಪ ವಿಭಾಗ-1ರಲ್ಲಿ ನಡೆಸಲಿದ್ದು ಈ ವ್ಯಾಪ್ತಿಗೆ ಬರುವ ಬೆಸ್ಕಾಂ ಗ್ರಾಹಕರು ತಮ್ಮ ಅಹವಾಲುಗಳಿದ್ದಲ್ಲಿ ಸಭೆಯಲ್ಲಿ ಸಲ್ಲಿಸಲು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

### ರಾಜ್ಯ ಮಟ್ಟದ ವಿಚಾರಗೋಷ್ಠಿ

» **ಚಿತ್ರದುರ್ಗ**

ಸಿಟಿಜನ್ಸ್‌ಫಾರ್‌ಸೋಷಿಯಲ್‌ಜಸ್ಟೀಸ್-ಕರ್ನಾಟಕ ದಿಕ್ಕೂಚಿ ಬಂಜಾರ-ಕರ್ನಾಟಕದವತಿಯಿಂದ ಸಂವಿಧಾನ ಗೌರವ ಅಭಿಯಾನ ಸಂವಿಧಾನೇರೋ ಮಾನ್ ಪಾನ್ ಅಭಿಯಾನದ ಅಂಗವಾಗಿ ರಾಜ್ಯ ಮಟ್ಟದ ವಿಚಾರಗೋಷ್ಠಿ ಯನ್ನು ಚಿತ್ರದುರ್ಗ ನಗರದಲ್ಲಿ ಜ. 18 ರಂದು ನಗರದ ವಿ.ಪಿ.ಬಡಾವಣೆಯ ಉಮಾಪತಿ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ. ಈ ವಿಚಾರ ಗೋಷ್ಠಿಯು ಬಾಬಾಸಾಹೇಬರ ಸಂವಿಧಾನ ಬದಲಾಯಿಸಿದ್ದು ಯಾರು? । ಬಲಪಡಿಸಿದ್ದು ಯಾರು? ಎಂಬ ವಿಷಯದ ಬಗ್ಗೆ ನಡೆಯಲಿದೆ. ಇದರ ಉದ್ಘಾಟನೆಯನ್ನು ಮಾಜಿ ಸಚಿವರು, ಔರಾದ್‌ನ ಶಾಸಕರಾದ ಪ್ರಭು ಚೌಹಾನ್ ನೇರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಕಲಬುರ್ಗಿ ಕ್ಷೇತ್ರದ ಮಾಜಿ ಸಂಸದರಾದ ಡಾ. ಉಮೇಶ್ ಜಾಧವ್ ವಹಿಸಲಿದ್ದಾರೆ. ಕುಡುಚಿ ಕ್ಷೇತ್ರದ ಮಾಜಿ ಶಾಸಕರು, ಬಿಜೆಪಿ ಕರ್ನಾಟಕದ ಪ್ರಧಾನ ಕಾರ್ಯದರ್ಶಿಗಳಾದ ಪಿ.ರಾಜೀವ್ ವಿಚಾರ ಮಂಡನೆ ಮಾಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಬಾಬುರಾವ್ ಚೌಹಾಣ್, ಮಾಜಿ ಶಾಸಕರಾದ ಬಸವರಾಜ ನಾಯಕ್, ಅಶೋಕ್ ನಾಯಕ್, ಚಂದ್ರ ನಾಯಕ್, ಶಿರಹಟ್ಟಿ ಶಾಸಕರಾದ ಡಾ ಚಂದ್ರು ಲಮಾಣಿ, ಹೂವಿನ ಹಡಗಲಿ ಶಾಸಕರಾದ ಕೃಷ್ಣ ನಾಯಕ್, ಚಿಂಚೂಳ್ಳಿ ಶಾಸಕರಾದ ಡಾ. ಅವಿನಾಶ್ ಜಾಧವ್ ಆಗಮಿಸಲಿದ್ದಾರೆ ಎಂದು ಸಂಘಟಕರಾದ ಜಯಸಿಂಹ ಕಾಟ್ರೋತ್, ಸುರೇಶ್ ನಾಯಕ್ ಭೀಮಸಮುದ್ರ, ಡಾ ಜಯಸಿಂಹ ಹಾಗೂ ಗುರುಪ್ರಸಾದ್ ಬೆಂಗಳೂರು ಇವರು ತಿಳಿಸಿದ್ದಾರ

### ಸಿಎಂ ಕುರ್ಚಿ ಮೇಲೆ ಸಿದ್ದರಾಮಯ್ಯ ಕುಳಿತಿದ್ದಾರೆ: ಸಚಿವ

» **ಮೈಸೂರು**

ಐದು ವರ್ಷವೂ ಈ ಸರ್ಕಾರ ಗಟ್ಟಿಯಾಗಿರುತ್ತದೆ. ಇದರಲ್ಲಿ ಅಲಗಾಡುತ್ತಿದೆ, ಖಾಲಿಯಾಗುತ್ತಿದೆ ಎಂಬ ಯಾವ ಚರ್ಚೆಯೂ ಬೇಡ. 2028ಕ್ಕೂ ನಮ್ಮದೇ ಸರ್ಕಾರ ಬರುತ್ತದೆ. ಆಗ ಬೇಕಾದರೆ ರೇಸಿನ ಬಗ್ಗೆ ಮಾತನಾಡೋಣ" ಎಂದು ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹೇಳಿದ್ದಾರೆ. ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಅವರು, ರೇಸೇ ನಡೆಯದ ಮೇಲೆ ಆಕಾಂಕ್ಷಿ ಪ್ರಶ್ನೆಯೇ ಬರುವುದಿಲ್ಲ. ರೇಸ್ ಮುಗಿದಿದೆ, ನಾವು ಗುರಿ ತಲುಪಿದ್ದೇವೆ. ಆಡಳಿತ ಮಾಡುತ್ತಿದ್ದೇವೆ. ಸದ್ಯಕ್ಕೆ ಅವ್ಯಾವ ಪ್ರಶ್ನೆಗಳು ಇಲ್ಲ ಎಂದು ತಿಳಿಸಿದರು. ವಿಪಕ್ಷಗಳಿಗೆ ಸಂವಿಧಾನಿಕವಾಗಿ ಕೆಲಸ ಮಾಡಲು ಯಾವ ವಿಚಾರವೂ ಇಲ್ಲ. ಹಾಗಾಗಿ ಕಾರಣ ಇಲ್ಲದ ವಿಚಾರವನ್ನು ಇದೇ ಎನ್ನುವ ರೀತಿ ಮಾತನಾಡುತ್ತಿದ್ದಾರೆ.

# ಮುಹೂರ್ತ ಮುಗಿಸಿದ ಮಾಯಾವಿ

## ದುರ್ಗದ ಯುವ ಪ್ರತಿಭೆ ರಘುರಾಮ್ ಬೆಳ್ಳಿ ತೆರೆಗೆ ಎಂಟ್ರಿ -ಹೊಸ ಪ್ರತಿಭೆಗಳಿಗೆ ಯಶಸ್ಸು ಸಿಗಲಿ: ಶ್ರೀ ಶಾಂತವೀರ ಸ್ವಾಮೀಜಿ

» **ಚಿತ್ರದುರ್ಗ**

ಕಲ್ಲಿನ ಕೋಟೆ ಚಿತ್ರದುರ್ಗದ ಯುವ ಪ್ರತಿಭೆ ರಘು ರಾಮ್ ನಾಯಕರಾಗಿ ಅಭಿನಯಿಸುತ್ತಿರುವ ಚೊಚ್ಚಲ ಚಿತ್ರ □ಮಾಯಾವಿ□ ಗೆ ಶುಕ್ರವಾರ ಮುಹೂರ್ತ ನಡೆಯಿತು. ಚಿತ್ರದುರ್ಗದ ಬೆಟ್ಟದ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಚಿತ್ರ ತಂಡವು ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಿತ್ರಕ್ಕೆ ಮುಹೂರ್ತ ಮುಗಿಸಿಕೊಂಡು, ಚಿತ್ರೀಕರಣಕ್ಕೆ ಅಡಿ ಇಟ್ಟಿತು. ಕುಂಚಿಟಿಗ ಮಹಾ ಸಂಸ್ಥಾನದ ಶ್ರೀ ಶಾಂತವೀರ ಸ್ವಾಮೀಜಿ ಅವರು ಕ್ಲಾಪ್ ಮಾಡುವ ಮೂಲಕ ಚಿತ್ರದ ಚಿತ್ರೀಕರಣಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಪತ್ರಕರ್ತ ಹಾಗೂ ಭೋವಿ ಮಹಾ ಸಂಸ್ಥಾನದ ಆಡಳಿತಾಧಿಕಾರಿ ಗೋವಿಂದಪ್ಪ ಸೇರಿದಂತೆ ಹಲವರು ಇದ್ದರು.

ಇದೇ ವೇಳೆ ಚಿತ್ರ ತಂಡಕ್ಕೆ ಶುಭಾಶಯ ಕೋರಿದ ಶ್ರೀಗಳು, ಹೊಸ ಪ್ರಯತ್ನ, ಹೊಸ ಕಲಾವಿದರು, ಹೊಸ ಚಿಂತನೆಗಳೊಂದಿಗೆ ಹೊಸತನ್ನು ಮಾಡುವ ಹಂಬಲದೊಂದಿಗೆ ಈ ತಂಡ ತನ್ನ ಅನುಭವಗಳನ್ನು ಸಿನಿಮಾ ಮೂಲಕ ಹೇಳುವುದಕ್ಕಾಗಿ ಬಂದಿದೆ. ವಿಶೇಷವಾಗಿ ಮಠದ ಭಕ್ತರು, ಜಿಲ್ಲೆಯವರೇ ಆದ ಯುವ ಪ್ರತಿಭೆ ರಘುರಾಮ್ ಅವರು ನಾಯಕ ನಟನಾಗಿ ಬೆಳ್ಳಿ ತೆರೆಗೆ ಕಾಲಿಡುತ್ತಿರುವುದು ತುಂಬಾ ಸಂತಸ ತಂದಿದೆ. ಒಂದೊಳ್ಳೆಯ ಪ್ರಯತ್ನದೊಂದಿಗೆ ತಮ್ಮ ಅನುಭವಗಳನ್ನು ಹೇಳಿಕೊಳ್ಳುವ ಹಂಬಲದಲ್ಲಿರುವ ಈ ತಂಡಕ್ಕೆ ಜನರ ಸಹಕಾರವೂ ಬೇಕಿದೆ ಎಂದು ಹೇಳಿದರು.

ಸಿನಿಮಾ ಮಾತ್ರವಲ್ಲ ಧಾರ್ಮಿಕ, ರಾಜಕೀಯ ಸೇರಿದಂತೆ ಎಲ್ಲಾ ರಂಗಗಳಲ್ಲೂ ಹೊಸಬರು ಬರಬೇಕು, ಹೊಸ ಆಲೋಚನೆಗಳು ಹುಟ್ಟಿಕೊಳ್ಳಬೇಕು. ಯಾವುದು ಕೂಡ ನಿಂತ ನೀರಾಗಬಾರದು. ಎಲ್ಲದಕ್ಕೂ ಚಲನಶೀಲತೆ ಬರಬೇಕಾದರೆ ಹೊಸ ಪ್ರಯತ್ನಗಳು, ಹೊಸ ಆಲೋಚನೆಗಳು, ಹೊಸ ಅನುಭಗಳು ಮೇಳೈಸಿಕೊಳ್ಳಬೇಕು, ಆಗ ಮಾತ್ರ ಎಲ್ಲಾ ರಂಗಕ್ಕೂ ಒಂದು ಚಲನಶೀಲತೆ ಬರುತ್ತದೆ. ಆ ನಿಟ್ಟಿನಲ್ಲಿ ಇವತ್ತು ಸಿನಿಮಾ ರಂಗ ಯುವ ಪ್ರತಿಭೆಗಳ ಮೂಲಕ ಪ್ರಜ್ವಲಿಸುತ್ತಿದೆ. ಆ ಸಾಲಿನಲ್ಲಿ ನಮ್ಮ ಜಿಲ್ಲೆಯವರೇ ಆದ ರಘುರಾಮ್ ಅವರಂತಹ ಯುವ ಪ್ರತಿಭೆ ಪ್ರಜ್ವಲಿಸಬೇಕು ಎಂದರು.

ಹೊಸಬರಿಗೆ ವೇದಿಕೆಗಳು ಅಗತ್ಯ. ಇವತ್ತು ಚಿತ್ರದುರ್ಗದವರೇ ಆದ ಗಿಲ್ಲಿ ಎನ್ನುವ ನಟ ಇವತ್ತು ರಿಯಾಲಿಟಿ ಶೋ ಮೂಲಕ ಕನ್ನಡಿಗರ ಮನೆ ಮಾತಾಗಿದ್ದಾರೆ. ದೊಡ್ಡ ದೊಡ್ಡ ನಟರು ಆತನ ಕಲೆಯನ್ನು ಮೆಚ್ಚಿಕೊಂಡು ಮಾತನಾಡುವಂತಹ ವಾತಾವರಣ ನಿರ್ಮಾಣವಾಗಿದೆ. ಅದಕ್ಕೆ ಕಾರಣವೇ ಸೂಕ್ತ ವೇದಿಕೆ ಸಿಕ್ಕಿದ್ದು. ಅಂತಹ ಸಾಕಷ್ಟು ಪ್ರತಿಭೆಗಳು ಎಲೆಮರೆಯ ಕಾಯಿಗಳಂತೆ ಗ್ರಾಮೀಣ ಭಾಗದಲ್ಲಿವೆ. ಅವೆಲ್ಲವಕ್ಕೂ ವೇದಿಕೆ ಸಿಗಬೇಕು. ಸಿನಿಮಾವೂ ಒಂದು ವೇದಿಕೆ. ಅಲ್ಲಿ ಒಳ್ಳೆಯ ನಟನಾಗಿ ಗುರುತಿಸಿಕೊಂಡರೆ ಜನಪ್ರಿಯತೆ ಜತೆಗೆ ದುಡಿಮೆಯೂ ಆಗುತ್ತದೆ. ಹಾಗಂತ ಅಲ್ಲಿ ಗುರುತಿಸಿಕೊಳ್ಳುವುದು ಅಷ್ಟು ಸುಲಭವಲ್ಲ, ಸಿನಿಮಾ ಮಾಡಿಯೂ ಹಣ ಮಾಡುತ್ತೇನೆನ್ನುವುದು ಕೂಡ ಅಷ್ಟು ಸರಳ ಇಲ್ಲ, ಒಟಿಟಿ, ಪೈರಸಿ ಬಂದ ಮೇಲೆ ಸಿನಿಮಾ ನಿರ್ಮಾಣ ದೊಡ್ಡ ಸವಾಲಾಗಿ ಎರ್ಪಟ್ಟಿದೆ. ಅವೆಲವನ್ನು ಮೀರಿ ಈ ತಂಡ ಸಕ್ಸಸ್ ಕಾಣಲಿ ಎಂದು ಶ್ರೀಗಳು ಹಾರೈಸಿದರು.

ಮಹೇಶ್ವರಪ್ಪ ಚಕ್ರಸಾಲಿ ಮತ್ತು ಶ್ರೀಮತಿ ರೂಪ ನಿರ್ಮಾಣದ ಈ ಚಿತ್ರಕ್ಕೆ ಶಂಕರ್ ನಿರ್ದೇಶನ ಮಾಡುತ್ತಿದ್ದಾರೆ. ಈ ಹಿಂದೆ ಅವರು □ಉಗ್ರಾವತಾರ□ ಎನ್ನುವ ಚಿತ್ರಕ್ಕೆ ಸಹಾಯಕ ನಿರ್ದೇಶಕರಾಗಿ ಕೆಲಸ ಮಾಡಿದ್ದಾರೆ. ಈಗ ಮಾಯಾವಿ ಮೂಲಕ ಅವರು ಬಡ್ತಿ ಪಡೆದಿದ್ದಾರೆ. ಕಥೆ, ಚಿತ್ರಕಥೆ ಬರೆಯುವ ಮೂಲಕ ನಿರ್ದೇಶನದ ಹೊಣೆಯನ್ನುತಾವೇಹೊತ್ತುಕೊಂಡಿದ್ದಾರೆ. ಗುರುದತ್ತ ಮುಸೂರಿ ಛಾಯಾಗ್ರಹಣ ಮಾಡುತ್ತಿದ್ದು, ಅಗಸ್ತ್ಯ ಸಂತೋಷ್ ಸಂಗೀತ ಸಂಯೋಜನೆ ಈ ಚಿತ್ರಕ್ಕಿದೆ. ಇನ್ನು ರಘು ರಾಮ್ ನಾಯಕರಾಗಿರುವ ಈ ಚಿತ್ರಕ್ಕೆ ನಿಶ್ಚಿತ ಶೆಟ್ಟಿ ನಾಯಕಿ. ಅವರೊಂದಿಗೆ ಹಿರಿಯ ಕಲಾವಿದ ಎಂ.ಕೆ. ಮಠ, ಸುರೇಶ್ ಬಾಬು ಸೇರಿದಂತೆ ಅನುಭವಿ ಕಲಾವಿದರ ತಂಡವೇ ಇದೆ.





> ಸಸ್ಪೆನ್ಸ್, ಥ್ರಿಲ್ಲರ್ ಅಂಶಗಳ ಜತೆಗೆ ನವಿರಾದ ಪ್ರೇಮ ಕಥಾ ಹಂದರದ ಈ ಚಿತ್ರಕ್ಕೆ ಒಟ್ಟು50 ದಿನಗಳ ಕಾಲ ಚಿತ್ರದುರ್ಗ, ಹೊಸಪೇಟೆ ಹಾಗೂ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆಸಲು ಯೋಜನೆ ಹಾಕಿಕೊಂಡಿದ್ದೇವೆ. ಹೊಸ ಪ್ರಯತ್ನದಲ್ಲಿ ಹೊಸ ಆಲೋಚನೆಗಳ ಮೂಲಕ ಹೊಸದಾದ ಒಂದು ಒಳ್ಳೆಯ ಕಥೆಯನ್ನು ಪ್ರೇಕ್ಷಕರಿಗೆ ಉಣಬಡಿಸುವ ಮೂಲಕ ನಮ್ಮನ್ನು ನಾವು ಭಿನ್ನವಾಗಿ ಗುರುತಿಸಿಕೊಳ್ಳುವ ಹಂಬಲದಲ್ಲಿದ್ದೇವೆ. ಪ್ರಯತ್ನ ನಮ್ಮದು, ಫಲ ಆ ದೇವರದು.
>
> ▪ **ರಘುರಾಮ್, ನಾಯಕ ನಟ**

# ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಭೂದಾನಿಗಳ ಸ್ಮಾರಕ ಪುನರ್‌ನಿರ್ಮಾಣ

» **ಚಳ್ಳಕೆರೆ**

ತಾಲ್ಲೂಕು ಅಖಿಲಭಾರತ ವೀರಶೈವ ಲಿಂಗಾಯಿತ ಮಹಾಸಭಾದ ವತಿಯಿಂದ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊ.ಬಿ.ಎಸ್.ಮಂಜುನಾಥರವರನ್ನು ಶುಕ್ರವಾರ ಅಭಿನಂದಿಸಲಾಯಿತು.

ಕಳೆದ ಸುಮಾರು 50 ವರ್ಷಗಳ ಹಿಂದೆ ಚಿತ್ರದುರ್ಗ ರಸ್ತೆಯಲ್ಲಿ ವೀರಶೈವಲಿಂಗಾಯತ ಸಮಾಜದ ಹಿರಿಯರಾದ ಹೆಗ್ಗೆರೆ ಗ್ರಾಮದ ಲಿಂಗೈಕ್ಯ ಎಚ್.ಪಿ.ಪಂಚಾಕ್ಷರಪ್ಪ, ಚನ್ನಬಸಮ್ಮ ದಂಪತಿಗಳು ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಗಾಗಿ ಸುಮಾರು 58 ಎಕರೆ ಜಮೀನನ್ನು ಉಚಿತವಾಗಿ ನೀಡಿದ್ದರು. ಮರಣದ ನಂತರ ಅವರ ಎರಡೂ ಸಮಾಧಿಗಳನ್ನು ಕಾಲೇಜಿನ ಆವರಣದಲ್ಲಿದ್ದವು. ಇತ್ತೀಚಿಗಷ್ಟೇ ಅಲ್ಲಿದ್ದ ಸ್ಮಾರಕವನ್ನು ಕಾಲೇಜು ವತಿಯಿಂದ ನವೀಕರಿಸಿದ ಹಿನ್ನಲೆಯಲ್ಲಿ ಅವರನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಅಖಿಲಭಾರತ ವೀರಶೈವ ಲಿಂಗಾಯಿತ ಮಹಾಸಭಾದ ಅಧ್ಯಕ್ಷ ಡಿ.ಜೆ.ಕಿರಣ್‌ಶಂಕರ್, ಉಪಾಧ್ಯಕ್ಷ ಮುರುಗೇಶ್, ಮಹಿಳಾ ಉಪಾಧ್ಯಕ್ಷೆ ಬಿ.ಎಂ.ಭಾಗ್ಯಮ್ಮ, ಎನ್.ರವಿಕುಮಾರ್, ಎಂ.ಮಂಜುನಾಥ, ವಿ.ತಿಪ್ಪೇಸ್ವಾಮಿ, ಕಾರ್ಯದರ್ಶಿ ಸಿ.ಸಿದ್ದಾರ್ಥ, ಡಿ.ಉಮಾಶಿವಕುಮಾರ್, ಗೌರಮ್ಮ ಮುಂತಾದವರು ಉಪಸ್ಥಿತರಿದ್ದರು.



# ನಗರಸಭೆಯ ಸ್ಥಾಯಿ ಸಮಿತಿಯ ನೂತನ ಅಧ್ಯಕ್ಷ ಮಲ್ಲಿಕಾರ್ಜುನ್



» **ಚಳ್ಳಕೆರೆ**

ನಗರಸಭೆಯ ನೂತನ ಸ್ಥಾಯಿ ಸಮಿತಿಯನ್ನು ಸದಸ್ಯರ ಅಭಿಪ್ರಾಯವನ್ನು ಪಡೆದು ರಚಿಸಲಾಯಿತು. ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಣ್ಣ, ನಗರಸಭೆ ನೂತನ ಸ್ಥಾಯಿ ಸಮಿತಿ ರಚನೆಯ ಬಗ್ಗೆ ಸದಸ್ಯರು ಮುಕ್ತವಾಗಿ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಪೌರಾಯುಕ್ತರ ಜಗರೆಡ್ಡಿ ಸಭೆಯಲ್ಲಿ ಹಾಜರಿರುವ ಎಲ್ಲಾ ಸದಸ್ಯರ ಅಭಿಪ್ರಾಯವನ್ನು ಪಡೆದು ನಗರಸಭೆಯ ಸ್ಥಾಯಿ ಸಮಿತಿಯ ನೂತನ ಅಧ್ಯಕ್ಷರಾಗಿ 5ನೇ ವಾರ್ಡ್‌ನ ಸದಸ್ಯ ಟಿ.ಮಲ್ಲಿಕಾರ್ಜುನರವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದು ಉಳಿದಂತೆ ಸದಸ್ಯರಾದಗಿ ಸಿ.ಎಂ.ವಿಶುಕುಮಾರ್, ಶಿವಕುಮಾರ್, ಚಳ್ಳಕೆರೆಯಪ್ಪ, ವಿರೂಪಾಕ್ಷಿ, ಕವಿತಾವೀರೇಶ್, ಶಿಲ್ಪಮುರುಳಿ, ನಿರ್ಮಲ, ತಿಪ್ಪಮ್ಮರವರನ್ನು ಆಯ್ಕೆ ಮಾಡಲಾಯಿತು.

ಸ್ಥಾಯಿ ಸಮಿತಿ ನೂತನ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್ ಮಾತನಾಡಿ, ಎಲ್ಲಾ ಸದಸ್ಯರ ಅಭಿಪ್ರಾಯದಂತೆ ಸ್ಥಾಯಿ ಸಮಿತಿ ಅಧ್ಯಕ್ಷನಾಗಿ ಆಯ್ಕೆಯಾಗಿದ್ದು, ಎಲ್ಲಾ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಎಲ್ಲಾ ವಾರ್ಡ್‌ಗಳಲ್ಲಿ ಅಭಿವೃದ್ದಿ ಕಾಮಗಾರಿ ಅನುಷ್ಠಾನಗೊಳಿಸಲು ಪ್ರಾಮಾಣಿಕ ಪ್ರಯತ್ನ ನಡೆಸುವ ಭರವಸೆ ನೀಡಿದರು.

### ತ್ಯಾಜ್ಯ ವಿಲೇವಾರಿ ಘಟಕ ನಿರ್ಬಂಧಿತ ಪ್ರದೇಶವೆಂದು ಘೋಷಿಸಿದೆ

» **ದಾವಣಗೆರೆ**

ಅವರಗೊಳ್ಳ ಗ್ರಾಮದ ಹತ್ತಿರ ಇರುವ ಮಹಾನಗರಪಾಲಿಕೆ ಒಡೆತನದಲ್ಲಿರುವ 33 ಎಕರೆ ವ್ಯಾಪ್ತಿಯ ಘನತ್ಯಾಜ್ಯ ವಿಲೇವಾರಿ ಘಟಕದ ಸರ್ವೆ ನಂ 117/2, 119, 123, 129, 129/1, 129/2, 129/4, 130/1 ಪ್ರದೇಶಗಳು ಸಂಪೂರ್ಣವಾಗಿ ನಿರ್ಬಂಧಿತ ಪ್ರದೇಶವೆಂದು ಘೋಷಿಸಲಾಗಿದೆ. ಯಾವುದೇ ಅನಧಿಕೃತ ವಾಹನಗಳಾಗಲಿ, ವ್ಯಕ್ತಿಗಳಾಗಲಿ, ಜಾನುವಾರುಗಳಾಗಲಿ ಪೂರ್ವಾನುಮತಿ ಇಲ್ಲದೇ ಪ್ರವೇಶವಿರುವುದಿಲ್ಲ. ಒಂದು ವೇಳೆ ಯಾವುದೇ ವ್ಯಕ್ತಿ, ವಾಹನ, ಜಾನುವಾರುಗಳು ಮಹಾನಗರಪಾಲಿಕೆಯ ಅನುಮತಿ ಇಲ್ಲದೆ ಅನಧಿಕೃತವಾಗಿ ಪ್ರವೇಶಿಸುವುದು ಹಾಗೂ ನುಸುಳಿ ಯಾವುದೇ ರೀತಿಯ ಅನಾಹುತಕೊಳಗಾದಲ್ಲಿ ಪಾಲಿಕೆ ಜವಾಬ್ದಾರಿಯಾಗಿರುವುದಿಲ್ಲ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ನಗರಸಭೆ ಸಾಮಾನ್ಯ ಸಭೆಯಲ್ಲಿ ವಿರೋಧ ಪಕ್ಷದ ಸದಸ್ಯರ ಆಕ್ಷೇಪ.

# ಯಾವುದೇ ವಾರ್ಡ್‌ಗಳಲ್ಲೂ ಸ್ವಚ್ಚತೆ ಇಲ್ಲ, ಅಭಿವೃದ್ದಿಯೂ ಇಲ್ಲ

» **ಚಳ್ಳಕೆರೆ**

ಜಿಲ್ಲೆಯಲ್ಲಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿರುವ ಚಳ್ಳಕೆರೆ ನಗರಸಭೆ ಆಡಳಿತವನ್ನು ಸುಲಿತವಾಗಿ ನಡೆಸಲು ಸುಸಜ್ಜಿತವಾದ ಕಟ್ಟಡವಿಲ್ಲ. ತಾತ್ಕಾಲಿಕವಾಗಿ ರಂಗಮಂದಿರದಲ್ಲಿ ನಗರಸಭೆ ಆಡಳಿತ ನಡೆಸುತ್ತಿದ್ದು, ನಗರಸಭೆಯ ಹಳೇ ಕಚೇರಿಯನ್ನು ತುರ್ತಾಗಿ ಸಿದ್ದಪಡಿಸಿ ಸಾರ್ವಜನಿಕರ ಸೇವೆ ನಮ್ಮ ಅವಧಿಯಲ್ಲೇ ಸಮರ್ಪಿಸಬೇಕಂದು ನಗರಸಭೆ ಎಲ್ಲಾ ಸದಸ್ಯರು ಒತ್ತಾಯಿಸಿದ ಪ್ರಸಂಗ ನಡೆಯಿತು.

ನಗರಸಭೆ ಸಾಮಾನ್ಯ ಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಾಭರಮಣ್ಣ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್ ನೇತೃತ್ವದಲ್ಲಿ ಶುಕ್ರವಾರ ನಡೆಯುತ್ತಿದ್ದು, ಪ್ರಾರಂಭದಲ್ಲಿ ಸ್ವಾಗತವನ್ನು ಕೋರಿದ ಪೌರಾಯುಕ್ತ ಜಗರೆಡ್ಡಿ ವಿಷಯಗಳ ಬಗ್ಗೆ ಸದಸ್ಯರು ಚರ್ಚೆ ನಡೆಸಿ ಮಾರ್ಗದರ್ಶನ ನೀಡುವಂತೆ ಮನವಿ ಮಾಡಿದರು.

ನಗರದ ಖಾಸಗಿ ಬಸ್ ನಿಲ್ದಾಣದ ತುರ್ತು ರಿಪೇರಿಗಾಗಿ ನಗರಸಭಾ ನಿಧಿಯಡಿ 4.20ಕೋಟಿಹಣ ಹಾಲಿ ಇದ್ದು ಈ ಹಣದಲ್ಲಿ ಖಾಸಗಿ ಬಸ್ ನಿಲ್ದಾಣದ ನಿರ್ಮಾಣ ಕಾರ್ಯ ಕೈಗೊಳ್ಳಲು ಸದಸ್ಯರು ಅನುಮೋದನೆ ನೀಡಬೇಕೆಂದು ವಿನಂತಿಸಿದಾಗ ನಮಗೆ ಕುಳಿತುಕೊಳ್ಳಲು ಜಾಗವಿಲ್ಲ, ಕಳೆದ ನಾಲ್ಕು ವರ್ಷಗಳಿಂದ ನಗರಸಭೆ ಹಳೇ ಕಚೇರಿ ರಿಪೇರಿ ಹಂತದಲ್ಲೇ ಇದೆ ಇತ್ತೀಚಿಗಂತು ಯಾವುದೇ ಅಭಿವೃದ್ಧಿ ಕಾಮಗಾರಿ ಆಗುತ್ತಿಲ್ಲ, ಇರುವ ಹಣವನ್ನು ಕೂಡಲೇ ನಗರಸಭೆಯ ತುರ್ತು ರಿಪೇರಿಗೆ ಉಪಯೋಗಿಸಿ ನಂತರ ಬೇರೆ ಕಾಮಗಾರಿಗೆ ನೀಡಿ ಎಂದು ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ಎಸ್. ಜಯಣ್ಣ, ವಿಶುಕುಮಾರ್, ವೆಂಕಟೇಶ್, ನಾಗಮಣಿ, ಪಾಲಮ್ಮ, ನಿರ್ಮಲ, ತಿಪ್ಪಕ್ಕ, ಸಾಕಮ್ಮ, ಕವಿತಾನಾಯಕಿ ಮುಂತಾದವರು ಒತ್ತಾಯಿಸಿದರು. ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಮುಂಭಾಗದಲ್ಲಿರುವ ನಿರ್ಮಿಸಿರುವ ನೂತನ ಮಳಿಗೆಗಳ ಹರಾಜಿಗೆ ಅನುಮತಿ ಕೇಳಿದ್ದೀರ, ಇನ್ನೂ ಆ ಭಾಗದಲ್ಲಿ ಜಾಗ ಲಭ್ಯವಿದ್ದು ಅಲ್ಲಿ ಮಳಿಗೆಗಳನ್ನು ನಿರ್ಮಿಸಿ ಒಂದೇ ಹಂತದಲ್ಲಿ ಹರಾಜು ಪ್ರಕ್ರಿಯೆ ಮಾಡಿ ಎಂದಾಗ ಕಾಂಗ್ರೆಸ್ ಸದಸ್ಯ ಆಕ್ಷೇಪಿಸಿದರು ಪರವಿರೋಧ ಜಟಾಪಟಿ ಮುಂದುವರೆಯಿತು.

ಇದಕ್ಕೆ ಪ್ರತಿಕ್ರಿಯಿಸಿದ ಪೌರಾಯುಕ್ತರ ಜಗರೆಡ್ಡಿ, ಸದಸ್ಯರ ಅಭಿಪ್ರಾಯದಂತೆ ಹೆಚ್ಚುವರಿ ಮಳಿಗೆಗಳನ್ನು ನಿರ್ಮಿಸುವ ಭರವಸೆ ನೀಡಿದರು. ನಾಯಕನಹಟ್ಟಿ ರಸ್ತೆಯ ಕರೇಕಲ್ ಕೆರೆ ಕೋಡಿ ನೀರು ಹರಿದು ರಸ್ತೆಯಲ್ಲಿ ಕಂದಕ ಉಂಟಾಗಿದ್ದು, ಅದನ್ನು ಕೂಡಲೇ ತುರ್ತಾಗಿ ರಿಪೇರಿಗೊಳಿಸುವುದಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರ ವಿನಯ್, ಜೆಇ ಲೋಕೇಶ್ ತಿಳಿಸಿದರು.

ನಗರದ ಜಿಲ್ಲಾ ಮಾದಿಗ ನೌಕರರ ಸಾಂಸ್ಕೃತಿಕ ಸಂಘ, ಛಲವಾದಿ ಕ್ಷೇಮಾಭಿವೃದ್ದಿ ಸಂಘ, ಸರ್ಕಾರಿ ನಿವೃತ್ತ ನೌಕರರ ಸಂಘ, ವೀರಶೈವ ಪಂಚಮಸಾಲಿ ಸಮಾಜಸಂಘ, ಹಿಂದುಳಿದ ವರ್ಗ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ನಿವೃತ್ತ ನೌಕರರ ಬಂಜಾರ ಕ್ಷೇಮಾಭಿವೃದ್ದಿ ಸಂಘ, ಗೌತಮಬುದ್ದ ಪ್ರತಿಷ್ಠಾನ ಮುಂತಾದವರು ನಿವೇಶನ ನೀಡುವಂತೆ ಅರ್ಜಿ ಸಲ್ಲಿಸಿದ್ದು, ಇವುಗಳನ್ನು ಪರಿಶೀಲಿಸಿ ಕಾನೂನುವಾಗಿದ್ದಲ್ಲಿ ವಿತರಣೆ ಮಾಡುವ ಬಗ್ಗೆ ನಿರ್ಧಾರ ಕೈಗೊಳ್ಳುವುದಾಗಿ ಪೌರಾಯುಕ್ತರು ತಿಳಿಸಿದರು.

ಜೆಡಿಎಸ್ ಸದಸ್ಯರಾದ ಸಿ.ಎಂ.ವಿಶುಕುಮಾರ್, ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ಕವಿತಾನಾಯಕಿ, ನಾಗಮಣಿ, ತಿಪ್ಪಮ್ಮ, ನಿರ್ಮಲ, ಸಾಕಮ್ಮ, ಎಸ್.ಜಯಣ್ಣ, ಶಿವಕುಮಾರ್, ಪಾಲಮ್ಮ, ಕಾಂಗ್ರೆಸ್ ಸದಸ್ಯ ಎಚ್.ಪ್ರಶಾಂತ್‌ಕುಮಾರ್ ಮುಂತಾದವರು, ನಗರಸಭೆ ವ್ಯಾಪ್ತಿಯ 31 ವಾರ್ಡ್‌ಗಳಲ್ಲಿ ಸ್ವಚ್ಚತೆ ಮಾಯವಾಗಿದೆ. ಪ್ರತಿನಿತ್ಯ ಸಾರ್ವಜನಿಕರು ವಿವಿಧ ವಾರ್ಡ್‌ಗಳಲ್ಲಿ ಕಸದಲಾರಿ, ಸಿಬ್ಬಂದಿ ಬರುತ್ತಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಆದ್ದರಿಂದ ಎಲ್ಲಾ ವಾರ್ಡ್‌ಗಳ ಸ್ವಚ್ಚತೆಗೆ ನಗರಸಭೆ ಆಯುಕ್ತರು ಕ್ರಮಕೈಗೊಳ್ಳಬೇಕೆಂದರು. ಆರೋಗ್ಯನಿರೀಕ್ಷಕರ ಸಭೆ ಕರೆದುಸೂಚನೆ ನೀಡುವುದಾಗಿ ಪೌರಾಯುಕ್ತರು ಭರವಸೆ ನೀಡಿದರು.

ಆರ್.ರುದ್ರನಾಯಕ, ಎಂ.ಜೆ. ರಾಘವೇಂದ್ರ, ಶಿಲ್ಪ, ಸುಮಕ್ಕ, ಕವಿತಾ, ಜಯಲಕ್ಷ್ಮಿ, ಆರ್.ಮಂಜುಳಾ, ಕವಿತಾವೀರೇಶ್, ವೈ.ಪ್ರಕಾಶ್, ಹೊಯ್ಸಳಗೋವಿಂದ, ಚಳ್ಳಕೆರೆಯಪ್ಪ, ವಿರೂಪಾಕ್ಷಿ, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ಸತೀಶ್, ಆರೋಗ್ಯ ನಿರೀಕ್ಷಕರಾದ ಗಣೇಶ, ಗೀತಾಕುಮಾರಿ, ಸುನೀಲ್, ರುದ್ರಮುನಿ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.



## ಫಾಸ್ಟ್ ನ್ಯೂಸ್

### ಜಾತಿಗಣತಿ ವರದಿ: ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಮಂಡನೆ :ಸಿಎಂ ಸಿದ್ದರಾಮಯ್ಯ

» ಮಂಗಳೂರು

ಜಾತಿಗಣತಿ ವರದಿಯನ್ನು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ವಿಷಯ ಮಂಡಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮಾಧ್ಯಮದವರೊಂದಿಗೆ ಮಾತನಾಡಿದರು.

**ಜಾತಿ ಗಣತಿ ವರದಿ: ವಿರೋಧ ಏಕೆ?** ಪ್ರತಿ ಪಕ್ಷಗಳು ಜಾತಿಗಣತಿಯನ್ನು ವಿರೋಧಿಸುತ್ತಿರುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ ವರದಿಯಲ್ಲಿ ಏನಿದೆ ಎಂದು ತಿಳಿದಿಲ್ಲದೇ ವಿರೋಧ ಏಕೆ ಮಾಡುತ್ತಾರೆ. ವರದಿ ಇನ್ನೂ ಬಹಿರಂಗಗೊಳ್ಳದಿರುವುದರಿಂದ ಈ ಬಗ್ಗೆ ನನಗೂ ತಿಳಿದಿಲ್ಲ ಎಂದರು ನಮ್ಮ ಪ್ರಣಾಳಿಕೆಯಲ್ಲಿ ಜಾತಿಗಣತಿಯನ್ನು ಮಂಡಿಸಲಾಗುವುದು ಎಂದು ಜನತೆಗೆ ಭರವಸೆ ನೀಡಲಾಗಿದೆ ಎಂದರು.

**ದರೋಡೆಕೋರರನ್ನು ಕೂಡಲೆ ಪತ್ತೆ ಹಚ್ಚಲು ಸೂಚನೆ:** ಉಲ್ಲಾಳ್ ನಲ್ಲಿ ನಡೆದಿರುವ ದರೋಡೆ ಪ್ರಕರಣದ ಬಗ್ಗೆ ಮಾತನಾಡಿ ದರೋಡೆಕೋರರನ್ನು ಕೂಡಲೇ ಪತ್ತೆ ಹಚ್ಚಿ ಶಿಕ್ಷೆ ನೀಡುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

### ಎಷ್ಟಾದರೂ ಹಣ-ಸವಲತ್ತು ಕೇಳಿ ಕೊಡ್ತೀನಿ: ಆದರೆ ಒಲಂಪಿಕ್ ಮೆಡಲ್ ತನ್ನಿ

» ಮಂಗಳೂರು

ಕ್ರೀಡಾಪಟುಗಳು, ಕೋಚ್ ಗಳು ಮತ್ತು ಕ್ರೀಡಾ ಇಲಾಖೆ ಎಷ್ಟಾದರೂ ಹಣ-ಸವಲತ್ತು ಕೇಳಿ. ನಾನು ಕೊಡ್ತೀನಿ. ಆದರೆ ಒಲಂಪಿಕ್ ನಲ್ಲಿ ರಾಜ್ಯದ ಪಟುಗಳು ದೇಶಕ್ಕಾಗಿ ಮೆಡಲ್ ತನ್ನಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು. ಯುವಜನ ಮತ್ತು ಕ್ರೀಡಾ ಇಲಾಖೆ ಮತ್ತು ಜಿಲ್ಲಾಡಳಿತ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ "ಕರ್ನಾಟಕ ಕ್ರೀಡಾಕೂಟ 2025 ನ್ನು ಉದ್ಘಾಟಿಸಿ ಮಾತನಾಡಿದರು. ಅಗತ್ಯ ವೇದಿಕೆ ಮತ್ತು ಉತ್ತಮ ಪ್ರೋತ್ಸಾಹ ಇಲ್ಲದಿದ್ದರೆ ಕ್ರೀಡಾ ಕ್ಷೇತ್ರ ಮತ್ತು ಕ್ರೀಡಾಪಟುಗಳು ಬೆಳವಣಿಗೆ ಆಗಲು ಸಾಧ್ಯವಿಲ್ಲ. ಆದ್ದರಿಂದ ನಮ್ಮ ಸರ್ಕಾರ ರಾಜ್ಯ, ರಾಷ್ಟ್ರ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಹಾಜರಾತಿ ಸೇರಿ ಇನ್ನಿತರೆ ರಿಯಾಯ್ತಿಗಳನ್ನು ಕೊಡುವ ಬಗ್ಗೆ ಕ್ಯಾಬಿನೆಟ್ ನಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ಪುನರುಚ್ಚರಿಸಿದರು. ಮುಂದಿನ ಬಜೆಟ್ ನಲ್ಲಿ ಮಂಗಳೂರು ಮತ್ತು ಉಡುಪಿ ಕ್ರೀಡಾಂಗಣಗಳ ಉನ್ನತೀಕರಣಕ್ಕೆ ತಲಾ 3 ಕೋಟಿ ರೂಪಾಯಿ ನಿಗಧಿ ಮಾಡ್ತೀನಿ ಎಂದು ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಘೋಷಿಸಿದರು. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲೂ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಾಗ ಶೇ2 ರಷ್ಟು ಉದ್ಯೋಗಗಳು ಕ್ರೀಡಾಟುಗಳಿಗೆ ಮೀಸಲು ಇಡಲಾಗುವುದು. ಜೊತೆಗೆ ಪೊಲೀಸ್, ಅರಣ್ಯ ಇಲಾಖೆ ಸೇರಿ ಸಮವಸ್ತ್ರ ಧರಿಸುವ ಹುದ್ದೆಗಳಿಗೆ ಶೇ3 ರಷ್ಟು ಉದ್ಯೋಗ ಕ್ರೀಡಾಪಟುಗಳಿಗೆ ಉದ್ಯೋಗ ಮೀಸಲು ಇಡಲಾಗುವುದು ಎಂದು ಸಿಎಂ ಘೋಷಿಸಿದರು. ಒಲಂಪಿಕ್ ನಲ್ಲಿ ಮೆಡಲ್ ತಂದವರಿಗೆ 6 ಕೋಟಿ ರೂಪಾಯಿ ಕೊಡ್ತೀವಿ. ಹಾಗೆಯೇ ಏಷ್ಯಾ ಕ್ರೀಡಾಕೂಟ ಮತ್ತು ರಾಷ್ಟ್ರಮಟ್ಟದಲ್ಲಿ ಪದಕ ತಂದವರಿಗೂ ನಗದು ಬಹುಮಾನ ಕೊಡುತ್ತಿದ್ದೇವೆ. ಈ ಪ್ರೋತ್ಸಾಹ ಸದುಪಯೋಗಪಡಿಸಿಕೊಂಡು ಮೆಡಲ್ ಗಳನ್ನು ತಂದು ಕ್ರೀಡಾಕ್ಷೇತ್ರವನ್ನು ಬೆಳಗಿಸಿ, ಬೆಳೆಸಿ ಎಂದು ಕರೆ ನೀಡಿದರು. ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್, ಒಲಂಪಿಕ್ ಅಸೋಸಿಯೇಷನ್ ಅಧ್ಯಕ್ಷ ಕೆ.ಗೋವಿಂದರಾಜು, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ವಿಧಾನಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ, ಐವನ್ ಡಿಸೋಜಾ, ಮಾಜಿ ಸಚಿವ ರಮಾನಾಥ ರೈ ಸೇರಿ ಜಿಲ್ಲೆಯ ಶಾಸಕರುಗಳು ಮತ್ತು ಪ್ರಮುಖರು ಉಪಸ್ಥಿತರಿದ್ದರು.

### ಕ್ರೀಡಾ ಶಾಲೆ, ನಿಲಯಗಳಿಗೆ ಆಯ್ಕೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯದ ವಿವಿಧ ಸ್ಥಳಗಳಲ್ಲಿ ನಡೆಸುತ್ತಿರುವ ಕ್ರೀಡಾಶಾಲೆ ಹಾಗೂ ಕ್ರೀಡಾ ನಿಲಯಗಳಿಗೆ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ವಿವಿಧ ಹಂತಗಳಲ್ಲಿ ಆಯ್ಕೆಯನ್ನು ನಡೆಸಿ, ಕ್ರೀಡಾಶಾಲೆ ನಿಲಯಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದೆ. ಆಯ್ಕೆ ನಡೆಯುವ ಸ್ಥಳ ಮತ್ತು ದಿನಾಂಕ: ಜ.27 ರಂದು ತಾಲ್ಲೂಕು ಕ್ರೀಡಾಂಗಣ, ಹರಿಹರ ಮೊ.ಸಂ: 94486 67255, ಜ.28 ರಂದು ತಾಲ್ಲೂಕು ಕ್ರೀಡಾಂಗಣ, ಹೊನ್ನಾಳಿ, ಮೊ.ಸಂ: 78926 41492, ಮತ್ತು ಸರ್ಕಾರಿ ಪದವಿ ಪೂರ್ವಕಾಲೇಜು ಮೈದಾನ, ನ್ಯಾಮತಿ ಮೊ.ಸಂ: 9480796263, ಜ.29 ರಂದು ತಾಲ್ಲೂಕು ಕ್ರೀಡಾಂಗಣ, ಚನ್ನಗಿರಿ ಮೊ.ಸಂ: 9480796263, ಜ.29 ರಂದು ಬೇಡರ ಕಣ್ಣಪ್ಪ ಪ್ರೌಢಶಾಲಾ ಮೈದಾನ, ಜಗಳೂರು, ಮೊ.ಸಂ: 9972464313, ಜ.31 ರಂದು ಜಿಲ್ಲಾ ಮಟ್ಟದ ಆಯ್ಕೆ ದಾವಣಗೆರೆ ಜಿಲ್ಲಾ ಕ್ರೀಡಾಂಗಣ, ಹಾಗೂ ಜಿಲ್ಲಾ ಕ್ರೀಡಾ ವಸತಿ ಶಾಲೆಗೆ ಪ್ರವೇಶ ಪಡೆಯಲಿಚ್ಚಿಸುವ ಕುಸ್ತಿ ಮತ್ತು ಖೋ-ಖೋ 11 ವರ್ಷದೊಳಗಿನ ಬಾಲಕರ ಆಯ್ಕೆ ಪ್ರಕ್ರಿಯೆ ನಡೆಸಲಾಗುವುದು. ಮೊ.ಸಂ: 9448667255, 9480796263, 9972464313, 9141091590..

---

#### ಸಿರಿಧಾನ್ಯ ಬೆಳೆಗಾರರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ

# ಸಿರಿಧಾನ್ಯ ಹಬ್ ನಿರ್ಮಾಣಕ್ಕೆ ಶೀಘ್ರ ಭೂಮಿ ಪೂಜೆ

» ಚಿತ್ರದುರ್ಗ

ಸಿರಿಧಾನ್ಯ ಉತ್ಪಾದಕರು, ಮಾರುಕಟ್ಟೆದಾರರು, ಗ್ರಾಹಕರ ನಡುವೆ ಸಂಪರ್ಕ ಕಲ್ಪಿಸುವ ಹಾಗೂ ಮಾರುಕಟ್ಟೆ ವಿಸ್ತರಿಸುವಉದ್ದೇಶದಿಂದಬೆಂಗಳೂರಿನಲ್ಲಿ "ಸಿರಿಧಾನ್ಯ ಹಬ್" ನಿರ್ಮಾಣಕ್ಕೆ ಶೀಘ್ರ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಕೃಷಿ ಸಚಿವರಾದ ಎನ್. ಚಲುವರಾಯಸ್ವಾಮಿ ಹೇಳಿದರು.

ಹೊಸದುರ್ಗ ತಾಲ್ಲೂಕಿನ ಶ್ರೀರಾಂಪುರ ದುರ್ಗದ ಸಿರಿ ರೈತ ಉತ್ಪಾದಕ ಕಂಪನಿ ಆವರಣದಲ್ಲಿ ಶುಕ್ರವಾರ ನಡೆದ ಸಿರಿಧಾನ್ಯ ಬೆಳೆಗಾರರೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಬೆಂಗಳೂರಿನಲ್ಲಿ ಸಿರಿಧಾನ್ಯ ಹಬ್ ನಿರ್ಮಾಣಕ್ಕೆಶೀಘ್ರದಲ್ಲಿಮುಖ್ಯಮಂತ್ರಿಗಳು ಭೂಮಿಪೂಜೆನೆರವೇರಿಸಲಿದ್ದು,ಮುಂದಿನ ಒಂದು ವರ್ಷದೊಳಗೆ ಸಿರಿಧಾನ್ಯ ಹಬ್ ನಿರ್ಮಿಸಲಾಗುವುದು. ಹಾಗಾಗಿ ಸಿರಿಧಾನ್ಯ ಹಬ್‌ನಲ್ಲಿ ಹೆಸರು ನೋಂದಣಿ ಮಾಡಿದರೆ ರಾಷ್ಟ್ರ, ಅಂತರ ರಾಷ್ಟ್ರೀಯ ಮಾರುಕಟ್ಟೆಗೆ ವೇದಿಕೆ ಸಿಗಲಿದ್ದು, ಉತ್ತಮ ಮಾರುಕಟ್ಟೆ ವ್ಯವಸ್ಥೆಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಇದೇ ಜ.23 ರಿಂದ 25 ರವರೆಗೆ ಬೆಂಗಳೂರಿನಲ್ಲಿ ಸಾವಯವ ಸಿರಿಧಾನ್ಯ ಅಂತರ ರಾಷ್ಟ್ರೀಯ ಮೇಳ ಹಮ್ಮಿಕೊಳ್ಳಲಾಗಿದ್ದು, ರಾಜ್ಯ, ರಾಷ್ಟ್ರ ಹಾಗೂ ಅಂತರ ರಾಷ್ಟ್ರೀಯ ಮಟ್ಟದಲ್ಲಿ ದಿನೇ ದಿನೇ ಬೇಡಿಕೆ ಹೆಚ್ಚಾಗುತ್ತಿದೆ. ಸಿರಿಧಾನ್ಯದ ಮಹತ್ವ ಎಲ್ಲರಿಗೂ ಪರಿಚಯಿಸಬೇಕು ಎಂಬುದು ಸಿರಿಧಾನ್ಯ ಮೇಳದ ಉದ್ದೇಶ ಎಂದು ಹೇಳಿದರು.

ರಾಜ್ಯದಲ್ಲಿಯೇ ಅತಿ ಹೆಚ್ಚು ಸಿರಿಧಾನ್ಯ ಬೆಳೆಯುವಲ್ಲಿ ಹೊಸದುರ್ಗ ತಾಲ್ಲೂಕು ಮುಂಚೂಣಿಯಲ್ಲಿದೆ. ಹೊಸದುರ್ಗ ತಾಲ್ಲೂಕಿನಲ್ಲಿ ಶೇ.90ರಷ್ಟು ಸಿರಿಧಾನ್ಯ ಬೆಳೆಯಲಾಗುತ್ತದೆ. ಹೊಸದುರ್ಗ ತಾಲ್ಲೂಕಿಗೆ ಇಲ್ಲಿಯವರೆಗೂ ಸಿರಿಧಾನ್ಯ ಬೆಳೆಗೆ ಸಿರಿಯೋಜನೆಯಡಿ ರೂ.33.96 ಕೋಟಿ ಸಹಾಯಧನ ನೀಡಲಾಗಿದ್ದು, ಕಳೆದ ವರ್ಷ ರೂ.15 ಕೋಟಿ ಸಹಾಯಧನ ಹೊಸದುರ್ಗ ತಾಲ್ಲೂಕಿಗೆ ನೀಡಿದೆ. ಈ ಯೋಜನೆಯಡಿ ರಾಜ್ಯದ 45 ಸಾವಿರ ಫಲಾನುಭವಿಗಳ ಪೈಕಿ ಹೊಸದುರ್ಗ ತಾಲ್ಲೂಕಿನಲ್ಲಿಯೇ 35 ಸಾವಿರ ಫಲಾನುಭವಿಗಳು ಇರುವುದು ಹೆಮ್ಮೆಯ ಸಂಗತಿ. ಹಾಗಾಗಿ ಶಾಸಕ ಗೋವಿಂದಪ್ಪನವರಿಗೆ ಇಲ್ಲಿನ ರೈತರ ಪರವಾಗಿ ಅಂತರ ರಾಷ್ಟ್ರೀಯ ಸಿರಿಧಾನ್ಯ ಮೇಳದಲ್ಲಿ ಸನ್ಮಾನಿಸಲಾಗುವುದು ಎಂದರು.




ಸಾವಯವ ಗೊಬ್ಬರ ಬಳಸಿದಲ್ಲಿ ಸಿರಿಧಾನ್ಯದ ಇಳುವರಿ ಹೆಚ್ಚಾಗುತ್ತದೆ. ರಸಗೊಬ್ಬರ ಕಡಿಮೆ ಮಾಡಿದಷ್ಟು ಭೂಮಿಯ ಫಲವತ್ತತೆ ಹೆಚ್ಚಾಗುತ್ತದೆ. ಸಿರಿಧಾನ್ಯ ರೋಗ ನಿರೋಧಕ ಶಕ್ತಿ ಇರುವ ಆಹಾರ. ಈ ಆಹಾರ ಸೇವನೆಯಿಂದ ಹೆಚ್ಚು ಕಾಲ ಆರೋಗ್ಯವಂತರಾಗಿ ಇರಲಿಕ್ಕೆ ಸಹಕಾರಿ ಆಗಲಿದೆ ಎಂದರು.

ಕೆಲವೇ ತಾಲೂಕುಗಳಿಗೆ ಮೀಸಲಾಗಿದ್ದ ಕೃಷಿಹೊಂಡ ನಿರ್ಮಾಣ ಸೌಲಭ್ಯವನ್ನು ರಾಜ್ಯದ ಎಲ್ಲ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ ಎಂದು ತಿಳಿಸಿದ ಅವರು, ಪಂಚ ಗ್ಯಾರಂಟಿ ಜೊತೆಗೆ ಅಭಿವೃದ್ಧಿ ಕೆಲಸಕ್ಕೂ ಒತ್ತು ನೀಡಲಾಗಿದೆ. ನಿರಂತರವಾಗಿ ರೈತಪರವಾಗಿರುವ ಸರ್ಕಾರ ನಮ್ಮದು ಎಂದರು.

ಕೃಷಿಯನ್ನು ಖುಷಿಯಿಂದ ಮಾಡಿದಲ್ಲಿ ಮಾತ್ರ ರೈತರು ಅಭಿವೃದ್ಧಿ ಕಾಣಲು ಸಾಧ್ಯ. ಸಮಗ್ರ ಕೃಷಿಪದ್ಧತಿ ಅಳವಡಿಸಿಕೊಂಡಲ್ಲಿ ಮಾತ್ರ ಅಭಿವೃದ್ಧಿ ಸಾಧ್ಯ. ರೈತರು ಕೃಷಿ ವಿಶ್ವವಿದ್ಯಾನಿಲಯ, ತಜ್ಞರು ಹಾಗೂ ಅಧಿಕಾರಿಗಳ ಸಲಹೆ, ಮಾರ್ಗದರ್ಶನ ಪಡೆದು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು. ವಾತಾವರಣಕ್ಕೆ ಹೊಂದಿಕೊಳ್ಳುವ ಬೆಳೆ ಬೆಳೆಯಬೇಕು. ರೈತರುಬೆಳೆದಲ್ಲಿದೇಶಸುಭಿಕ್ಷತೆಯಿಂದಿರಲು ಸಾಧ್ಯ. ಯಾವ ಕಂಪನಿಗಳಿಂದಲ್ಲ ಎಂದು ಅಭಿಪ್ರಾಯಪಟ್ಟರು ಅವರು, ಸಿರಿಧಾನ್ಯ ನಾಡಾಗಿರುವ ಹೊಸದುರ್ಗ ತಾಲ್ಲೂಕಿಗೆ ಸಿರಿಧಾನ್ಯ ಬೆಳೆ ಪ್ರೋತ್ಸಾಹಕ್ಕಾಗಿ ಇಲಾಖೆಯಿಂದ ಹೆಚ್ಚಿನ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ಹೊಸದುರ್ಗಶಾಸಕಬಿ.ಜಿ.ಗೋವಿಂದಪ್ಪ ಮಾತನಾಡಿ, ರೈತರಿಗೆ ಸಿರಿಧಾನ್ಯ ಬೆಳೆಯಲು ಉತ್ತೇಜಿಸುವ ಉದ್ದೇಶದಿಂದ ಇದೇ ಜನವರಿ 23 ರಿಮದ ಸಿರಿಧಾನ್ಯ ಮೇಳ ಆಯೋಜಿಸಲಾಗಿದೆ. ಸಿರಿಧಾನ್ಯ ಬೆಳೆಯನ್ನು ಪರಿಶೀಲನೆ ಮಾಡಲು ಸಚಿವರು ಹಾಗೂ ಅಧಿಕಾರಿಗಳ ತಂಡ ಹೊಸದುರ್ಗದ ಮಲ್ಲಿಹಳ್ಳಿಗೆ ಭೇಟಿ ನೀಡಿದ್ದು, ಸಚಿವರು ಉತ್ಸುಕತೆಯಿಂದ ಆಗಮಿಸಿ, ರೈತರೊಂದಿಗೆ ಸಮಗ್ರ ಚರ್ಚೆ ನಡೆಸಿದರು. ದುರ್ಗದ ಸಿರಿ ರೈತ ಉತ್ಪಾದನಾ ಕಂಪನಿ ರೈತರಿಗೆ ಸಹಾಯ ಮಾಡುತ್ತಿದೆ. ಸರ್ಕಾರ ರೈತರಿಗೆ ಹೆಚ್ಚು ಒತ್ತು ನೀಡುತ್ತಿದೆ. ಸಚಿವರು ಸಮಗ್ರವಾಗಿ ಕೃಷಿ ಬಗ್ಗೆ ತಿಳಿದಿದ್ದು, ಅಷ್ಟೇ ಆಸಕ್ತಿವಹಿಸಿ, ಕೃಷಿಕರಿಗೆ ಹಲವು ಸೌಲಭ್ಯಗಳನ್ನು ಕಲ್ಪಿಸಲು ಆಸಕ್ತರಾಗಿದ್ದಾರೆ. ತಾಲ್ಲೂಕಿನ ರೈತರು ಸಿರಿಧಾನ್ಯ ಬೆಳೆಗೆ ದೇಶಾದ್ಯಂತ ಹೆಸರುವಾಸಿಯಾಗಿದೆ. ಮಲ್ಲಿಹಳ್ಳಿ ಸರ್ಕಾರ ಹಾಗೂ ವಿಶ್ವ ವಿದ್ಯಾಲಯಗಳ ಸಲಹೆ ಸೌಲಭ್ಯ ಪಡೆದು, ಸಾವಯವ ಕೃಷಿ, ರೇಷ್ಮೆ ಸಾಕಾಣಿಕೆ, ಹಸು ಸಾಕಾಣಿಕೆ ಮೂಲಕ ಮಿಶ್ರ ಕೃಷಿ ಅವಲಂಬಿಸಿ, ಆರ್ಥಿಕವಾಗಿ ಸಫಲರಾಗಿದ್ದಾರೆ. ಕೃಷಿಯನ್ನು ಖುಷಿಯಿಂದ ಮಾಡಬೇಕು. ಹಿಂದೆ ಸಿರಿಧಾನ್ಯ ಬಡವರ ಆಹಾರವಾಗಿತ್ತು. ಈಗ ಸಿರಿವಂತರ ಆಹಾರವಾಗಿದೆ. ಹೆಚ್ಚು ಸಿರಿಧಾನ್ಯ ಬೆಳೆದು, ಸೇವಿಸಿ, ಉತ್ತಮ ಆರೋಗ್ಯ ಕಾಪಾಡಿಕೊಳ್ಳಿ ಎಂದು ಶಾಸಕರು ಸಲಹೆ ನೀಡಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ಮಾತನಾಡಿ, 'ಕೃಷಿಯಲ್ಲಿ ಆಧುನಿಕತೆ ಬೆಳೆದಂತೆಲ್ಲಾ ಸಿರಿಧಾನ್ಯ ವಿಸ್ತೀರ್ಣ, ಉತ್ಪಾದನೆ ಕಡಿಮೆಯಾಯಿತು. ಸಕ್ಕರೆ, ಮೈದಾ, ರಿಫೈನ್ಡ್ ಆಯಿಲ್ ಬಳಕೆ ಹೆಚ್ಚಾಯಿತು ಪರಿಣಾಮ ಆರೋಗ್ಯದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿತು ಎಂದು ಹೇಳಿದರು.

ಸಾವೆ, ನವಣೆ, ರಾಗಿ ಸೇರಿದಂತೆ ಹಲವು ಬೆಳೆಗಳು ತೃಣ ಅಥವಾ ಕಿರುಧಾನ್ಯವಲ್ಲ ಇಂದು ಸಿರಿಧಾನ್ಯಗಳಾಗಿವೆ. ಹೊಸದುರ್ಗ ತಾಲ್ಲೂಕಿನಲ್ಲಿ 28 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಸಿರಿಧಾನ್ಯ ಬೆಳೆ ಬೆಳೆಯಲಾಗುತ್ತಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ 30 ಸಾವಿರ ಹೆಕ್ಟೇರ ಪ್ರದೇಶಕ್ಕೂ ಹೆಚ್ಚು ಸಿರಿಧಾನ್ಯ ಬೆಳೆ ಬೆಳೆಯುವ ಮೂಲಕ ಸುಮಾರು 3 ಸಾವಿರ ಟನ್‌ಗಿಂತಲೂ ಹೆಚ್ಚು ಸಿರಿಧಾನ್ಯ ಬೆಳೆಯಲಾಗುತ್ತದೆ ಎಂದು ಹೇಳಿದರು.

ಸಿರಿಧಾನ್ಯ ಮೇಳಗಳು ಜಾಗೃತಿ ಮೂಡಿಸುವ ಮೇಳಗಳಾಗಿವೆ. ಬೆಂಗಳೂರಿನಲ್ಲಿ ನಡೆಯುವ ಅಂತರ ರಾಷ್ಟ್ರೀಯ ಸಿರಿಧಾನ್ಯ ಮೇಳಕ್ಕೆ ಈಗಾಗಲೇ 20 ವಿದೇಶಗಳು, 20 ಕ್ಕೂ ಅಧಿಕ ರಾಜ್ಯಗಳು ಭಾಗವಹಿಸಲಿಕ್ಕೆ ನೋಂದಣಿ ಮಾಡಿಸಲಾಗಿದೆ. ಸರ್ಕಾರವೂ ರೈತರ ಅಭಿವೃದ್ಧಿಗೆ ಶ್ರಮಿಸುತ್ತಿದೆ.

ಸಿರಿಧಾನ್ಯ ಬೆಳೆಯ ಜೊತೆಗೆ ಸಂಸ್ಕರಣಾ ಕಾರ್ಯವೂ ನಡೆಯಬೇಕು. ಈ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ 37 ರೈತ ಉತ್ಪಾದಕ ಕಂಪನಿಗಳು ಸಕ್ರಿಯವಾಗಿದ್ದು, ಇವುಗಳ ಉತ್ತೇಜನಕ್ಕೆ. ಸಿರಿಧಾನ್ಯಗಳ ಮೌಲ್ಯವರ್ಧನೆಗೆ ರೂ.10 ರಿಂದ 20 ಲಕ್ಷ ಸಹಾಯಧನ, ಮೇಲ್ದರ್ಜೆಗೇರಿಸಲು ರೂ.6 ಲಕ್ಷ ಸಹಾಯಧನ ಸೇರಿದಂತೆ ಹಲವು ಸೌಲಭ್ಯಗಳನ್ನು ಕಲ್ಪಿಸಿದೆ. ಭದ್ರಾ ಮೇಲ್ದಂಡೆ ಯೋಜನೆ, ಚೆಕ್ ಡ್ಯಾಂ ನಿರ್ಮಾಣ, ಬ್ರಿಡ್ಜ್ ಕಂ ಬ್ಯಾರೇಜ್ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ರೂಪಿಸಿ ಶಾಸಕರು ಹೊಸದುರ್ಗವನ್ನು ನೀರಾವರಿ ಕ್ಷೇತ್ರ ಮಾಡುವ ಮೂಲಕ ರೈತರ ಏಳಿಗೆಗೆ ಶ್ರಮಿಸುತ್ತಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಸಿರಿಧಾನ್ಯಗಳ ಸಿರಿ ಎಂಬ ಕರಪತ್ರ ಕರಪತ್ರಗಳನ್ನು ಕೃಷಿ ಸಚಿವ ಚಲುವರಾಯಸ್ವಾಮಿ ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಕೃಷಿಕ ಸಮಾಜದ ಅಧ್ಯಕ್ಷರಾಗಿಶಿವಮೂರ್ತಿ, ಸಾವಯವ ಕೃಷಿ ಮಿಷನ್ ಮಾಜಿ ಅಧ್ಯಕ್ಷ ಸೋಮಶೇಖರ್, ಕೃಷಿ ಇಲಾಖೆ ಉಪನಿರ್ದೇಶಕ ಶಿವಕುಮಾರ್, ನಬಾರ್ಡ್‌ನ ಕವಿತಾ, ತಹಶೀಲ್ದಾರ್ ತಿರುಪತಿ ಪಾಟೀಲ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಿ.ಎಸ್. ಈಶ ಸೇರಿದಂತೆ ಕೃಷಿ ಅಧಿಕಾರಿಗಳು, ರೈತರು ಇದ್ದರು.

---

#### ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿಕೆ

## ಸಿರಿಧಾನ್ಯ ಖರೀದಿಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು

» ಚಿತ್ರದುರ್ಗ

ಬೆಂಬಲಬೆಲೆಯಡಿಸಿರಿಧಾನ್ಯಗಳನ್ನುಖರೀದಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದಿಂದ ಪತ್ರ ಬರೆದು ಶಿಫಾರಸ್ಸು ಮಾಡಲಾಗಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.

ಹೊಸದುರ್ಗ ತಾಲ್ಲೂಕಿನ ಶ್ರೀರಾಂಪುರ ಹೋಬಳಿಯ ಮಲ್ಲಿಹಳ್ಳಿ ಗ್ರಾಮದ ಕೃಷಿಕ ಪ್ರಭುಲಿಂಗಪ್ಪ ಹಾಗೂ ಮಹೇಶ್ ಅವರ ಸಿರಿಧಾನ್ಯ ರೈತರ ಒಕ್ಕಲು ಕಣ ಹಾಗೂ ಕ್ಷೇತ್ರಕ್ಕೆ ಶುಕ್ರವಾರ ಭೇಟಿ ನೀಡಿದ ಅವರು ರೈತರೊಂದಿಗೆ ಸಂವಾದ ನಡೆಸಿ, ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಹೊಸದುರ್ಗ ತಾಲ್ಲೂಕಿನಲ್ಲಿ ರಾಜ್ಯದಲ್ಲಿ ಅತಿಹೆಚ್ಚು ಸಿರಿಧಾನ್ಯ ಬೆಳೆ ಬೆಳೆಯಲಾಗುತ್ತದೆ. ಈ ಭಾಗದಲ್ಲಿ ಸಾಂಪ್ರದಾಯಿಕವಾಗಿಯೇ ಸಿರಿಧಾನ್ಯ ಬೆಳೆಯುವುದು ರೂಢಿಯಲ್ಲಿದೆ. ಕಡಿಮೆ ಮಳೆಯ ನಡುವೆ ಬರಿ ಇಬ್ಬನಿ ಆಧರಿಸಿ ವಾರ್ಷಿಕವಾಗಿ ಎರಡು ಬೆಳೆಗಳನ್ನು ರೈತರು ತೆಗೆಯುತ್ತಾರೆ. ಈ ಮೊದಲು ಸಿರಿಧಾನ್ಯಗಳಿಗೆ ಮಾರುಕಟ್ಟೆ ಇರಲಿಲ್ಲ. ಈಗ ಮಾರುಕಟ್ಟೆ ದೊರಕುತ್ತಿದೆ. ರಾಗಿ, ಭತ್ತ, ತೊಗರಿ ಮಾದರಿಯಲ್ಲಿ ಸಿರಿಧಾನ್ಯಗಳನ್ನು ಬೆಂಬಲ ಬೆಲೆಯಡಿ ಖರೀದಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದರು.



ಇದೇ ಜ.23 ರಿಂದ 25 ರವರೆಗೆ ಅಂತರರಾಷ್ಟ್ರೀಯ ಸಾವಯವ ಸಿರಿಧಾನ್ಯ ಮೇಳ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಮೇಳ ಉದ್ಘಾಟಿಸುವರು. ದೇಶದ 25 ರಾಜ್ಯಗಳ ಕೃಷಿ ಮಂತ್ರಿಗಳು ಹಾಗೂ ಅಧಿಕಾರಿಗಳು, ರೈತರು ಭಾಗವಹಿಸುವರು. ಇದರೊಂದಿಗೆ ವಿವಿಧ ದೇಶಗಳ ಅಧಿಕಾರಿ ಹಾಗೂ ರೈತರು ಸಹ ಮೇಳದಲ್ಲಿ ಪಾಲ್ಗೊಳ್ಳುವರು. ಈ ಮೂಲಕ ಅಂತರಾಷ್ಟ್ರೀಯ ಮಟ್ಟದಲ್ಲೂ ಸಿರಿಧಾನ್ಯಗಳಿಗೆ ಮಾರುಕಟ್ಟೆ ದೊರಕಿಸಲು ಪ್ರಯತ್ನ ಮಾಡಲಾಗುವುದು ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದರು.

### ಶಾಸಕ ಬಿ.ಜಿ.ಗೋವಿಂದಪ್ಪ ಅವರಿಗೆ ಸನ್ಮಾನ

ಹೊಸದುರ್ಗ ಶಾಸಕ ಗೋವಿಂದಪ್ಪನವರು ಸ್ವತಃ ಕೃಷಿಕರಾಗಿದ್ದು, ಸಿರಿಧಾನ್ಯ ಬೆಳೆಯುವುದರೊಂದಿಗೆ ಆಹಾರದಲ್ಲಿಯೂ ಸಿರಿಧಾನ್ಯ ಬಳಸುತ್ತಿದ್ದಾರೆ. ಈ ಮೂಲಕ ತಾಲ್ಲೂಕಿನ ರೈತರಿಗೆ ಮಾದರಿಯಾಗಿದ್ದಾರೆ. ಹೊಸದುರ್ಗ ಮಾದರಿಯಲ್ಲಿ ಮಳೆ ಕಡಿಮೆ ಬೀಳುವ ರಾಜ್ಯದ ಇತರೆ ಜಾಗದಲ್ಲಿ ಸಿರಿಧಾನ್ಯ ಬೆಳೆಯಲು ರೈತರಿಗೆ ಸರ್ಕಾರದಿಂದ ಪ್ರೋತ್ಸಾಹ ನೀಡಲಾಗುವುದು. ಅಂತರಾಷ್ಟ್ರೀಯ ಮೇಳದಲ್ಲಿ ಮುಖ್ಯಮಂತ್ರಿಗಳಿಂದ ಶಾಸಕ ಬಿ.ಜಿ.ಗೋವಿಂದಪ್ಪ ಅವರಿಗೆ ಸನ್ಮಾನಿಸಲಾಗುವುದು ಎಂದರು.

ಮಲ್ಲಿಹಳ್ಳಿ ಗ್ರಾಮದ ಮಹೇಶ್ ಹಾಗೂ ಪ್ರಭುಲಿಂಗಪ್ಪ ನವರ ಸಿರಿಧಾನ್ಯ ರೈತರ ಒಕ್ಕಲು ಕಣ ಹಾಗೂ ಕ್ಷೇತ್ರಕ್ಕೆ ಭೇಟಿ ನೀಡಿದ್ದೇನೆ. ರೈತ ಮಹೇಶ್ ಬೆಂಗಳೂರಿನಲ್ಲಿ ಖಾಸಗಿ ಕಂಪನಿಯಲ್ಲಿ ರೂ.12 ಸಾವಿರಕ್ಕೆ ದುಡಿಯುತ್ತಿದ್ದರು. ಖರ್ಚು ಕಳೆದು ತಿಂಗಳಿಗೆ ರೂ.4 ಸಾವಿವರ ಮಾತ್ರ ಉಳಿಯುತ್ತಿತ್ತು. ಈಗ ಮರಳಿ ಸಮಗ್ರ ಕೃಷಿ ಪದ್ಧತಿಯಲ್ಲಿ ವಾರ್ಷಿಕವಾಗಿ ಎಲ್ಲಾ ಖರ್ಚು ಕಳೆದು ರೂ.4 ಲಕ್ಷ ಲಾಭ ಗಳಿಸುತ್ತಿದ್ದಾರೆ. ರೇಷ್ಮೆ, ಕೋಳಿ ಸಾಕಾಣಿಕೆ, ಸಿರಿ ಧಾನ್ಯಗಳನ್ನು ಬೆಳದು ರಾಜ್ಯದ ಇತರೆ ಯುವಕರಿಗೂ ಮಾದರಿಯಾಗಿದ್ದಾರೆ. ಇನ್ನೊರ್ವ ರೈತ ಪ್ರಭುಲಿಂಗಸ್ವಾಮಿ ಸಹ ಸಮಗ್ರ ಕೃಷಿ ಮಾಡುತ್ತಿದ್ದು, ಯಾವುದೇ ಸಾಲ ಹಾಗೂ ಬಡ್ಡಿಯ ಜಂಜಾಟವಿಲ್ಲದೇ ನೆಮ್ಮದಿಯ ಜೀವನ ನಡೆಸುತ್ತಿದ್ದಾರೆ. ಕೃಷಿ ಇಲಾಖೆ, ಕೃಷಿ ವಿಶ್ವ ವಿದ್ಯಾಲಯಗಳು ನೀಡುವ ಸಲಹೆಗಳನ್ನು ರೈತರು ಕೃಷಿಯಲ್ಲಿ ಅಳವಡಿಸಿಕೊಂಡರೆ ಜೀವನ ಸುಧಾರಿಸುವುದು ಎಂದು ಸಚಿವ ಚಲುವರಾಯಸ್ವಾಮಿ ಅಭಿಪ್ರಾಯ ಪಟ್ಟರು.

---

**ಪ್ರಮುಖ ಸುದ್ದಿ**

# ಸುಣ್ಣದ ಗುಮ್ಮಿ ಸ್ಥಳಾಂತರ : ಬದಲಿ ಸೂಕ್ತ ಜಾಗ ಕಲ್ಪಿಸಿ

» ಚಿತ್ರದುರ್ಗ

ನಗರದ ಜೋಗಿಮಟ್ಟಿ ರಸ್ತೆಯಲ್ಲಿನ ಸುಣ್ಣದಗುಮ್ಮಿ ಸ್ಥಳಾಂತರ ಮಾಡಲು ನಗರಸಭೆ ನಿರ್ಧಾರ ಮಾಡಿದ್ದು ಇದರ ಬದಲಿಗೆ ಸೂಕ್ತ ಜಾಗ ಕಲ್ಪಿಸಿಕೊಡುವಂತೆ ಆಗ್ರಹಿಸಿ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಸುಣ್ಣವನ್ನು ತಯಾರು ಮಾಡುವವರು ಪ್ರತಿಭಟನೆ ನಡೆಸಿದರು.

ಚಿತ್ರದುರ್ಗ ನಗರದ ಜೋಗಿಮಟ್ಟಿ ರಸ್ತೆ. 5ನೇ ಕ್ರಾಸ್ ಪ್ರದೇಶದಲ್ಲಿ ಸುಮಾರು 20-30 ಸುಣ್ಣ ಸುಡುವ ಗುಮ್ಮಿಗಳಿದ್ದು ಸರಿ ಪ್ರದೇಶವು ಒಂದು ಕಾಲದಲ್ಲಿ ಊರಿನ ಹೊರಭಾಗದಲ್ಲಿದ್ದು ನಮ್ಮ ತಾತ-ಮುತ್ತಾನವರ ಕಾಲದಿಂದಲೂ ಸಹ ಸುಣ್ಣ ಸುಡುತ್ತಾ ಜೀವನ ಸಾಗಿಸುತ್ತಾ ಬಂದಿರುತ್ತಾರೆ.

ನಾವುಗಳು ಸಹ ಇದೇ ಕಸುಬನ್ನು ಮುಂದುವರೆಸುತ್ತಾ ಸುಮಾರು 150 ಕುಟುಂಬಕ್ಕೆ ಜೀವನಕ್ಕೆ ಇದು ಆಧಾರವಾಗಿರುತ್ತದೆ. ನಾವುಗಳು ಅವಿದ್ಯಾವಂತರಾಗಿದ್ದು ಈಗಾಗಲೇ ಅರ್ಧ ಜೀವನವನ್ನು ಮತ್ತು ವಯಸ್ಸನ್ನು ಕಳೆದಿರುತ್ತೇವೆ. ನಮಗೆ ಬೇರೆ ಕೆಲಸವನ್ನು ಮಾಡಲು ಸಹ ಕಷ್ಟಸಾಧ್ಯವಾಗಿರುತ್ತದೆ. ಈಗ ಊರು ಬೆಳೆದಂತೆ ಊರಿನ ಮಧ್ಯಭಾಗದಲ್ಲಿ ಸುಣ್ಣದ ಗುಮ್ಮಿಗಳು ಇರುತ್ತವೆ. ಈ ಮೊದಲೇ ನಾವುಗಳು ಸಾಕಷ್ಟು ಭಾರಿ ಜಿಲ್ಲಾಧಿಕಾರಿಗಳಿಗೆ, ಜನಪ್ರತಿನಿಧಿಗಳಿಗೆ ಪರ್ಯಾಯ ಜಾಗವನ್ನು ಕಲ್ಪಸಿಕೊಡಲು ಅರ್ಜಿಯನ್ನು ಕೊಟ್ಟಿದ್ದರೂ ಸಹ ಯಾವುದೇ ಫಲಕಾರಿಯಾಗಿ ರುವುದಿಲ್ಲ ಎಂದು ಮನವಿಯಲ್ಲಿ ತಿಳಿಸಿದ್ದಾರೆ.



ಈ ಮಧ್ಯೆ ಶಾಸಕರು ಸಹ ನಮ್ಮ ಸ್ಥಳಕ್ಕೆ ಭೇಟಿ ನೀಡಿ ನಮ್ಮ ಸಮಸ್ಯೆಯನ್ನು ಆಲಿಸಿದ್ದಾರೆ. ಆದರೂ ಸಹಾ ನಗರಸಭೆಯ ಪೌರಾಯುಕ್ತರು ಯಾವುದೇ ನಮಗೆ ನೋಟೀಸ್ ನೀಡದೆ ಏಕಾಏಕಿ ಜೆ.ಸಿ.ಬಿ. ಸಿಬ್ಬಂದಿ. ಮತ್ತು ಪೊಲೀಸ್ ಇಲಾಖೆಯ ನೆರವಿನೊಂದಿಗೆ ಸುಣ್ಣದ ಗುಮ್ಮಿಗಳನ್ನು ಕೆಡವಲು ಮುಂದಾಗಿರುವುದು ಖಂಡನೀಯ ನಾವುಗಳು ಸುಣ್ಣದಗುಮ್ಮಿಯ ಸ್ಥಳಾಂತರ ಮಾಡಲು ಸೂಕ್ತವಾದ ಜಾಗ ಮತ್ತು ಸೌಲಭ್ಯವನ್ನು ನೀಡಿದಲ್ಲಿ ಸ್ಥಳಾಂತರ ಮಾಡಲು ಯಾವುದೇ ತಂಟೆ ತಕರಾರು ಇರುವುದಿಲ್ಲ ಹಿಂದೆ ಹೊಳಲ್ಕೆರೆ ರಸ್ತೆಯಲ್ಲಿರುವ ಮಂಡಕ್ಕಿ ಭಟ್ಟಿಗಳು ಸಹ ಊರಿನ ಮಧ್ಯಭಾಗದಲ್ಲಿದ್ದು ಅವುಗಳನ್ನು ಊರಿನ ಹೊರಭಾಗದ ಹಳೆ ಬೆಂಗಳೂರು ರಸ್ತೆಗೆ ಸೂಕ್ತ ಮೂಲಭೂತ ಸೌಲಭ್ಯಗಳೊಂದಿಗೆ ಸ್ಥಳಾಂತರಿಸಲಾಗಿರುತ್ತದೆ. ಇದೇ ರೀತಿ ನಮ್ಮ ಸುಣ್ಣದ ಗುಮ್ಮಿಗಳಿಗೂ ಸಹ ಮೂಲಭೂತ ಸೌಲಭ್ಯಗಳೊಂದಿಗೆ, ಸೂಕ್ತ ಜಾಗವನ್ನು ನೀಡಬೇಕಾಗಿ ಮನವಿ ಮಾಡಿದ್ದು, ಇಲ್ಲವಾದಲ್ಲಿ ನಾವು ಬೀದಿಗೆ ಇಳಿದು ಹೋರಾಟವನ್ನು ಮಾಡಬೇಕಾಗುತ್ತದೆ ಎಂದು ಜಿಲ್ಲಾಡಳಿತಕ್ಕೆ ಎಚ್ಚರಿಕೆ ನೀಡಿದ್ದಾರೆ. ಪರ್ಯಾಯ ಜಾಗಕ್ಕೆ ಆಗ್ರಹಿಸಿ ಸುಣ್ಣವನ್ನು ತಯಾರು ಮಾಡುವವರು ತಹಶೀಲ್ದಾರ್ ಹಾಗೂ ನಗರಸಭೆಯ ಆಯುಕ್ತರಿಗೆ ಮನವಿ ಸಲ್ಲಿಸಿದರು.

ನಗರಸಭೆ ಮಾಜಿ ಸದಸ್ಯ ಮಹೇಶ್, ಮುಖಂಡರಾದ ರಾಜಣ್ಣ, ಸಿದ್ದರಾಜು, ಗೋಪಿ, ನಾಗರಾಜು, ಶಿವು, ಬಸವರಾಜು, ನಿಂಗರಾಜು, ತಿಪ್ಪೇರುದ್ರಪ್ಪ, ರಾಘವೇಂದ್ರ, ಜಯ್ಯಣ್ಣ, ರೇಖಾ, ಕರಿಬಸಮ್ಮ, ಸಿಂಧೂ, ರಾಧಮ್ಮ, ಜ್ಯೋತಿ, ಶೈಲಾ, ಕಮಲಮ್ಮ, ಕಾವೇರಿ, ಸುಮಕ್ಕ, ಭೂಮಿಕ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಜನವರಿ 18 ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

» ದಾವಣಗೆರೆ

ಅವರಗೆರೆ, ದಾವಣಗೆರೆ ಮತ್ತು ಯರಗುಂಟೆ ವಿದ್ಯುತ್ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಜನವರಿ 18 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿವಿಧ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಮಾಮಾಸ್ ಜಾಯಿಂಟ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶಾಬನೂರು ರಸ್ತೆ, ಎಸ್.ಎಸ್. ಲೇಔಟ್ ಎ. ಬ್ಲಾಕ್, ಕುವೆಂಪು ನಗರ, ಬಾಟ್ಲಿ ಬಿಲ್ಡಿಂಗ್ ಸುತ್ತಮುತ್ತ, ಸಿದ್ದವೀರಪ್ಪ ಬಡಾವಣೆ 1ನೇ ಅಡ್ಡ ರಸ್ತೆ ಯಿಂದ 7ನೇ ಅಡ್ಡರಸ್ತೆವರೆಗೆ, ಗ್ಲಾಸ್‌ಹೌಸ್, ಬಾಪೂಜಿ ಬ್ಯಾಂಕ್ ಸಮುದಾಯ ಭವನದ ಹಿಂಭಾಗದ ಪ್ರದೇಶ , ಬಿ.ಐ.ಇ.ಟಿ. ಕಾಲೇಜು ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಮಂಡಿಪೇಟೆ, ಬೆನ್ನೆ ಕಂಪನಿ ರಸ್ತೆ, ಎಮ್.ಜಿ ರಸ್ತೆ, ಎನ್.ಆರ್ ರಸ್ತೆ, ಬೆಲ್ಲೂಡಿಹಳ್ಳಿ, ಮಹಾವೀರ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಮಂಡಕ್ಕಿ ಬಟ್ಟಿ, 1 ರಿಂದ 10 ನೇ ಕ್ರಾಸ್, ಇಂದಿರಾನಗರ, ಸಿದ್ದರಾಮೇಶ್ವರ ಬಡಾವಣೆ, ಕಾರ್ಲ್ ಮಾರ್ಸ್ ನಗರ, ಕೋಳಿ ಚನ್ನಪ್ಪ ಬಡಾವಣೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಹೆಚ್.ಕೆ.ಆರ್. ಸರ್ಕಲ್, ಕೆ.ಇ.ಬಿ ಕಾಲೋನಿ, ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸ ಬಡಾವಣೆ, ಮೌನೇಶ್ವರ ಬಡಾವಣೆ, ಸೈಯದ್ ಪೀರ್ ಬಡಾವಣೆ, ಐ.ಟಿ.ಐ. ರಿಂಗ್ ರಸ್ತೆ, ಜಯನಗರ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, ಎಸ್. ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಭಗೀರಥ ಸರ್ಕಲ್, ಕಾಳಿಕಾಂಬ ದೇವಸ್ಥಾನ, ಶಕ್ತಿನಗರ, ಹಾಗೂ ಇ.ಎಸ್.ಐ ಆಸ್ಪತ್ರೆ ಮತ್ತು ಸುತ್ತಮುತ್ತಲಿನ ಪ್ರದೇಶಗಳು, ಪಿ.ಬಿ. ರಸ್ತೆ., ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಶ್ರೀ ಮುರಘ ರಾಜೇಂದ್ರ ಸ್ವಾಮಿಗಳ ಮಠ, ಜಾಧವ್ ಕ್ಲಿನಿಕ್ ಸುತ್ತ ಮುತ್ತ , ಶಿವಪ್ಪ ವೃತ್ತದಿಂದ ಜಯದೇವ ವೃತ್ತದವರೆಗೆ ಹಾಗೂ ಸುತ್ತಮುತ್ತ ಪ್ರದೇಶಗಳು". ಪೊಲೀಸ್ ಕ್ವಾಟ್ರಸ್, ತುಂಗ, ಭದ್ರ, ಸರಸ್ವತಿ, ಕೃಷ್ಣಬ್ಲಾಕ್, ಅರುಣಾ ಸರ್ಕಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು. ಎಮ್.ಸಿ.ಸಿ. ಎ ಬ್ಲಾಕ್, ನ್ಯಾಯಾಧೀಶರ ವಸತಿ ಗೃಹಗಳು, ತೊಗಟವೀರ ಕಲ್ಯಾಣ ಮಂದಿರ, ವಿನೋಬ ನಗರ 1ನೇ ಮುಖ್ಯ ರಸ್ತೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಸ್.ಎಸ್. ಬಡಾವಣೆ.ಎ ಬ್ಲಾಕ್, ಶಾಂತಿನಗರ, ಕುಂದುವಾಡ ರಸ್ತೆ, ಮಹಾನಗರ ಪಾಲಿಕೆ ಕುಡಿಯುವ ನೀರಿನ ಸ್ಥಾವರ, ಬಸವೇಶ್ವರ ಬಡಾವಣೆ, ಮಹಾಲಕ್ಷ್ಮೀ ಬಡಾವಣೆ, ಬಾಲಾಜಿ ನಗರ, ಕುಂದುವಾಡ ಕೆರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಪಿ.ಬಿ ರೋಡ್, ರಿಲಯನ್ಸ್ ಮಾರ್ಕೆಟ್, ಸುಲ್ತಾನ್ ಡೈಮೈಂಡ್ಸ್, ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ನಿಟುವಳ್ಳಿ ಹಾಗೂ ನಿಟುವಳ್ಳಿ ಹೊಸಬಡಾವಣೆ, ದುರ್ಗಾಂಬಿಕ ದೇವಸ್ಥಾನ ಸುತ್ತಮುತ್ತ, 60 ಅಡಿ ರಸ್ತೆ ಮತ್ತು ಸುತ್ತ ಮುತ್ತಲಿನ ಪ್ರದೇಶಗಳು ಡೆಂಟಲ್ ಕಾಲೇಜ್ ರಸ್ತೆ, ಮ್ಯಾಕ್ಸ್, ಕೆಎಸ್‌ಪಿ, ಕಡ್ಲಿ ಬಿಲ್ಡಿಂಗ್, ಬಿಎಸ್‌ಸಿ, ಎಆರ್‌ಜಿ ಕಾಲೇಜ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, ನಿಜಲಿಂಗಪ್ಪ ಬಡಾವಣೆ, ರಿಂಗ್ ರೋಡ್, ಕುಂದವಾಡ ರಸ್ತೆ, ಯಲ್ಲಮ್ಮನಗರ, ವಿನೋಬನಗರ 4ನೇ ಮೇನ್, 3ನೇ ಮೇನ್ ಹಾಗೂ ಸುತ್ತಮುತ್ತಲ ಪ್ರದೇಶಗಳು. ಎ.ವಿ.ಕೆ ಕಾಲೇಜ್ ರಸ್ತೆ, ರತ್ನಮ್ಮ ಮಹಿಳಾ ಹಾಸ್ಟೆಲ್, ಸೀತಮ್ಮ ಕಾಲೇಜ್ ಮತ್ತು ಬಡಾವಣೆ ಪೊಲೀಸ್ ಠಾಣೆ, ಹದಡಿ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಎಂ.ಬಿ. ಕೇರಿ, ಹೊಂಡದ ಸರ್ಕಲ್, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇ.ಡಬ್ಲ್ಯೂ. ಎಸ್. ಕಾಲೋನಿ, ಹಳೇಪೇಟೆ, ಬಾರ್‌ಲೈನ್ ರಸ್ತೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, ಇ.ಎಸ್.ಐ ಆಸ್ಪತ್ರೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು ಶಕ್ತಿನಗರ, ಬನಶಂಕರಿ ದೇವಸ್ಥಾನದ ಸುತ್ತಮುತ್ತ, ರಾಜೇಂದ್ರ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು, ಮೀನು ಮಾರುಕಟ್ಟೆ, ಜೋಗಲ್ ಬಾಬಾ ಲೇಔಟ್, ಮುಸ್ತಾಫಾ ನಗರ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

### ವಸತಿ ಶಾಲೆಗಳ 6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್. ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳಲ್ಲಿ 2025–26ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು, ಫೆಬ್ರವರಿ 15ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. ಜಿಲ್ಲೆಯ ಯಾವುದೇ ಶಾಲೆಯಲ್ಲಿ 5ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪೋಷಕರು ತಮಗೆ ಸಮೀಪವಿರುವ ಜಿಲ್ಲೆಯ ಯಾವುದೇ ವಸತಿ ಶಾಲೆಗಳಿಗೆ ಭೇಟಿ ನೀಡಿ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿಯೇ ತಾವು ದಾಖಲಾಗಲು ಬಯಸುವ ವಸತಿ ಶಾಲೆಗಳನ್ನು ಆದ್ಯತಾ ಕ್ರಮದಲ್ಲಿ ಆಯ್ಕೆ ಮಾಡಬೇಕು. ಅಭ್ಯರ್ಥಿಯ ಮೆರಿಟ್, ಮೀಸಲಾತಿ ಹಾಗೂ ಪ್ರವೇಶ ಬಯಸುವ ಶಾಲೆಗಳ ಆದ್ಯತಾ ಕ್ರಮದ ಮೇಲೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ Computerised Auto Selection ಮೂಲಕ ಸೀಟು ಹಂಚಿಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು 2025ರ ಜನವರಿ 25 ಕೊನೆಯ ದಿನವಾಗಿದೆ.

ಬಜೆಟ್‌ನಲ್ಲಿ ಘೋಷಿಸಿದ್ದನ್ನು ಜಾರಿ ಮಾಡಿ ನುಡಿದಂತೆ ನಡೆದ ಸಿಎಂ ಸಿದ್ದರಾಮಯ್ಯ

# ರಾಜೀವ್ ಆರೋಗ್ಯ ವಿಜ್ಞಾನ ವಿವಿಯ ಪ್ರಾದೇಶಿಕ ಕಚೇರಿಗೆ ಸಿಎಂ ಶಂಕುಸ್ಥಾಪನೆ

» ಮಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ಬಜೆಟ್ ನಲ್ಲಿ ಘೋಷಿಸಿದ್ದಂತೆ

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿವಿಯ ಪ್ರಾದೇಶಿಕ ಕಚೇರಿಗೆ ಇಂದು ಶಂಕು ಸ್ಥಾಪನೆ ನೆರವೇರಿಸಿ ಮತ್ತೊಮ್ಮೆ ನುಡಿದಂತೆ ನಡೆದ ಮುಖ್ಯಮಂತ್ರಿ ಎನ್ನುವ ಹೆಗ್ಗಳಿಕೆಯನ್ನು ಮುಂದುವರೆಸಿದ್ದಾರೆ.

ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಮಾತನಾಡಿದ ಮುಖ್ಯಮಂತ್ರಿಗಳು, ರಾಜೀವ್ ಗಾಂಧಿ ವಿವಿ, ಏಷ್ಯಾದ ಅತ್ಯಂತ ದೊಡ್ಡ ಆರೋಗ್ಯ ವಿಶ್ವ ವಿದ್ಯಾಲಯ ಆಗಿದೆ. 3.5 ಲಕ್ಷ ವೈದ್ಯ ವಿದ್ಯಾರ್ಥಿಗಳಿರುವ ಅತ್ಯಂತ ದೊಡ್ಡ ಆರೋಗ್ಯ ವಿವಿ ಇದಾಗಿದೆ. ಆದ್ದರಿಂದ ಗುಣಮಟ್ಟದ ವೈದ್ಯರನ್ನು ರೂಪಿಸುವುದರ ಜೊತೆಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವಲ್ಲಿ ರಾಜೀವ್ ಗಾಂಧಿ ವಿವಿಯ ಕೊಡುಗೆ ಅಪಾರವಾಗಿದೆ ಎಂದರು. ಸರ್ಕಾರಿ ಆಸ್ಪತ್ರೆಗಳೂ ಖಾಸಗಿ ಆಸ್ಪತ್ರೆಗಳ ಮಾದರಿಯಲ್ಲಿ ಶುಚಿತ್ವ ಮತ್ತು ನಿರ್ವಹಣೆ ಕಾಪಾಡುವ ಜೊತೆಗೆ ಗುಣಮಟ್ಟದ ಚಿಕಿತ್ಸಾ ಸೌಲಭ್ಯ ಸಿಗುವಂತಾಗಬೇಕು. ಶ್ರೀಮಂತರು ಮತ್ತು ನಮ್ಮಂಥಾ ರಾಜಕಾರಣಿಗಳೂ ಸರ್ಕಾರಿ ಆಸ್ಪತ್ರೆಗೆ ಬರುವಂಥಾಗಬೇಕು ಎನ್ನುವ ದಿಕ್ಕಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದೇವೆ ಎಂದರು.ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜು ಇರಬೇಕು ಎನ್ನುವುದು ನನ್ನ ಗುರಿ. ಮಂಗಳೂರಿನಲ್ಲಿ



ಉತ್ತಮ ಆರೋಗ್ಯ ಸೇವೆ ಇದ್ದರೂ ಈ ಜಿಲ್ಲೆಗೂ ಸರ್ಕಾರಿ ವೈದ್ಯಕೀಯ ಕಾಲೇಜಿನ ಅಗತ್ಯ ಇದೆ. ಈ ದಿಕ್ಕಿನಲ್ಲೂ ಸರ್ಕಾರ ಯೋಚಿಸಿ ಕ್ರಮ ಕೈಗೊಳ್ಳಲಿದೆ.

ರಾಜೀವ್ ಗಾಂಧಿ ಆರೋಗ್ಯ ವಿವಿ ಆರೋಗ್ಯ ಸೇವೆ ಸರಳವಾಗಿ ಜನರಿಗೆ ಸಿಗುವ ದಿಕ್ಕಿನಲ್ಲಿ ಸಂಶೋಧನೆಗಳನ್ನು ಹೆಚ್ಚೆಚ್ಚು ನಡೆಸಬೇಕು. ದೇಶದ ಅತ್ಯುತ್ತಮ ಆರೋಗ್ಯ ಸೇವೆ ಬಡವರಿಗೂ ಸುಲಭವಾಗಿ ಸಿಗುವಂತೆ ಮಾಡಬೇಕು ಎಂದು ಕರೆ ನೀಡಿದರು.ಈ ಕ್ಷೇತ್ರದ ಡಿಪ್ಲಮೋ ಮತ್ತು ಇತರೆ ಕೋರ್ಸ್ ಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ವೈದ್ಯ ವಿಜ್ಞಾನ ಪದವೀಧರರೂ ಯುವ ನಿಧಿಗೆ ಅರ್ಹತೆ ಗಳಿಸಿದ್ದಾರೆ. ವೈದ್ಯ ವಿದ್ಯಾರ್ಥಿಗಳು ಇತರೆ ಕ್ಷೇತ್ರಗಳಿಗೆ ವಲಸೆ ಹೋಗದೆ ಆರೋಗ್ಯ ಕ್ಷೇತ್ರದಲ್ಲೇ ತಮ್ಮ ಸೇವೆ ಸಲ್ಲಿಸಬೇಕು ಎಂದು ಕರೆ ನೀಡಿದರು.

**BPL ಇದ್ದವರಿಗೆ ಉಚಿತ ಸೇವೆ:** :ಕಐ ಕಾರ್ಡ್ ಇದ್ದವರಿಗೆ ಎಲ್ಲಾ ರೀತಿಯ ಆರೋಗ್ಯ ಸೇವೆಯನ್ನು ಉಚಿತವಾಗಿ ನೀಡಿ ಎನ್ನುವ ಸೂಚನೆಯನ್ನು ವೈದ್ಯಕೀಯ ಕಾಲೇಜುಗಳಿಗೆ ಸೂಚನೆ ನೀಡಲಾಗಿದೆ ಎಂದರು.ಬಡವರಿಗೂ ಕೂಡ ದೊಡ್ಡ ದೊಡ್ಡ ಕಾಯಿಲೆಗಳು ಬರುತ್ತಿವೆ. ಕಿಡ್ನಿ ಕಸಿಗೆ 5000 ಮಂದಿ ಸಾಲಿನಲ್ಲಿದ್ದಾರೆ. ಕಿಡ್ನಿ ದಾನಿಗಳು ಸಿಕ್ಕರೆ ನಿತ್ಯ ಕಿಡ್ನಿ ಕಸಿ ಮಾಡುವ ನುರಿತ ವೈದ್ಯರ ತಂಡ ನಮ್ಮಲ್ಲಿದೆ ಎಂದರು. ಇಂದು ನಾನು ಶಂಕುಸ್ಥಾಪನೆ ನೆರವೇರಿಸಿರುವ ಪ್ರಾದೇಶಿಕ ಕಚೇರಿಯ ನಿರ್ಮಾಣ ಮತ್ತು ಕಾರ್ಯಕ್ಷಮತೆ ಎರಡೂ ಗುಣಮಟ್ಟದಲ್ಲೆ ಕೂಡಲಿ ಎಂದು ಸೂಚಿಸಿದರು.

### ಕೋಟೆಕರ್ ಉಲ್ಲಾಳ ಬ್ಯಾಂಕ್ ದರೋಡೆ: ಪೊಲೀಸ್ ಅಧಿಕಾರಿಗಳ ಜೊತೆ ಸಿಎಂ ಸಭೆ

**ಮಂಗಳೂರು:** ಕೋಟೆಕರ್ ಉಲ್ಲಾಳದ ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣದ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ತುರ್ತು ಸಭೆ ನಡೆಸಿದ ಮುಖ್ಯಮಂತ್ರಿಗಳು ಶೀಘ್ರ ಆರೋಪಿಗಳ ಪತ್ತೆಗೆ ಖಡಕ್ ಸೂಚನೆ ನೀಡಿದರು. ವೈದ್ಯಕೀಯ ಶಿಕ್ಷಣ ಇಲಾಖೆಯ ಕಾರ್ಯಕ್ರಮ ಮುಗಿಯುತ್ತಿದ್ದಂತೆ ಪಶ್ಚಿಮ ರೇಂಜ್ ನ ಐಜಿ ಅಮಿತ್, ಪೊಲೀಸ್ ಆಯುಕ್ತ ಸಿಂಗ್, ಅನುಪಮ್ ಅಗರವಾಲ್, ಎಸ್.ಪಿ ಯತೀಶ್ , ಡಿವೈಎಸ್ ಪಿ ಸೇರಿ ಹಿರಿಯ ಅಧಿಕಾರಿಗಳ ಜೊತೆ ಸಭೆ ನಡೆಸಿದರು. ಘಟನೆಯ ಕುರಿತಂತೆ ಸಮಗ್ರ ಮಾಹಿತಿ ಪಡೆದ ಮುಖ್ಯಮಂತ್ರಿಗಳು, ನೀವೆಲ್ಲಾ ಇದ್ದು ಯಾಕೆ ಹೀಗಾಯ್ತು? ಆರೋಪಿಗಳು ಸಲೀಸಾಗಿ ತಪ್ಪಿಸಿಕೊಂಡು ಹೋಗಿದ್ದು ಹೇಗೆ ? ಎಷ್ಟು ಟೋಲ್ ಗಳನ್ನು ದಾಟಿ ಹೋಗಿದ್ದಾರೆ. ನೀವು ಟೋಲ್ ಗಳನ್ನು ಏಕೆ ಟೈಟ್ ಮಾಡಲಿಲ್ಲ ಎಂದು ಗರಂ ಆಗಿ ಪ್ರಶ್ನಿಸಿದರು. ಸಹಕಾರಿ ಬ್ಯಾಂಕ್ ನಲ್ಲಿ ಭದ್ರತಾ ಸಿಬ್ಬಂದಿ ಇರಲಿಲ್ಲ. ಐದಾರು ಮಂದಿ ಮಾತ್ರ ಬ್ಯಾಂಕ್ ಸಿಬ್ಬಂದಿ ಇದ್ದರು. ಆರೋಪಿಗಳು ಕನ್ನಡ ಮತ್ತು ಹಿಂದಿಯಲ್ಲಿ ಮಾತಾಡಿರುವುದು ದಾಖಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು. ಎಲ್ಲಾ ಟೋಲ್ ಗಳಲ್ಲೂ ಬಿಗಿ ತಪಾಸಣೆ ನಡೆಸಬೇಕು. ನಾಲ್ಕು ಜಿಲ್ಲೆಗಳ ವ್ಯಾಪ್ತಿಯಲ್ಲಿ ನಾಕಾಬಂಧಿ ಹಾಕಿ ಆದಷ್ಟು ಬೇಗ ಆರೋಪಿಗಳನ್ನು ಬಂಧಿಸಿ ಕಠಿಣ ಕಾನೂನು ಕ್ರಮಕ್ಕೆ ಒಪ್ಪಿಸಿ ಎಂದು ಮುಖ್ಯಮಂತ್ರಿಗಳು ಸೂಚನೆ ನೀಡಿದರು.



ಚಳ್ಳಕೆರೆ ನಗರದ ಪಾವಗಡ ರಸ್ತೆಯಲ್ಲಿ ಚಾಲಕನ ನಿಯಂತ್ರಣ ತಪ್ಪಿ ಕಾರೊಂದು ಪಲ್ಟಿಯಾದ ಪರಿಣಾಮ ಹೈದರಬಾದ್ ಮೂಲಕ ಮೂವರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಹೋಗಿರುತ್ತಾರೆ.

### ರಸ್ತೆ ಸುರಕ್ಷತೆ ಬಿತ್ತಿಚಿತ್ರ ಬಿಡುಗಡೆ



» ಚಿತ್ರದುರ್ಗ

ಚಿತ್ರದುರ್ಗ ನಗರದ ಪ್ರಾದೇಶಿಕ ಸಾರಿಗೆ ಕಚೇರಿಯಲ್ಲಿ ಗುರುವಾರ ರಸ್ತೆ ಸುರಕ್ಷತೆಬಗ್ಗೆಅರಿವುಹಾಗೂಬಿತ್ತಿಪತ್ರಗಳನ್ನುಬಿಡುಗಡೆಗೊಳಿಸಲಾಯಿತು. ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ–2025ರ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮವನ್ನು ಶಿವಮೊಗ್ಗ ವಿಭಾಗದ ಉಪಸಾರಿಗೆ ಆಯುಕ್ತ ಭೀಮನಗೌಡ ಪಾಟೀಲ್ ಉದ್ಘಾಟನೆ ನೆರವೇರಿಸಿ, ರಸ್ತೆ ಸುರಕ್ಷತೆ ಬಗ್ಗೆ ಅರಿವು ಹಾಗೂ ಬಿತ್ತಿಚಿತ್ರ ಬಿಡುಗಡೆ ಮಾಡಿದರು. ಕಾರ್ಯಕ್ರಮದಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ ಎಂ ಕಾಳಿಸಿಂಗೆ, ಹಿರಿಯ ಮೋಟಾರು ವಾಹನ ನಿರೀಕ್ಷಕ ಮಹಂತೇಶ್, ಮೋಟಾರು ವಾಹನ ನಿರೀಕ್ಷಕ ಪ್ರಕಾಶ ಹಾಗೂ ಅಧೀಕ್ಷಕ ಸಿ.ಡಿ.ಹೇಮಂತ್ ಕುಮಾರ್ ಇದ್ದರು.

## ಪ್ರಮುಖ ಸುದ್ದಿ


# ದೈನಂದಿನ ಅಹಾರದಲ್ಲಿ ಸಿರಿಧಾನ್ಯ ಬಳಕೆಯಿಂದ ಆರೋಗ್ಯ ವೃದಿ; ಅಪರ ಜಿಲ್ಲಾಧಿಕಾರಿ ಲೋಕೇಶ್

» ದಾವಣಗೆರೆ

ಕಲಬೆರೆಕೆ ರಹಿತ ಮತ್ತು ಆರೋಗ್ಯವಂತರಾಗಿರಲು ಸಿರಿಧಾನ್ಯದಿಂದ ತಯಾರಿಸಿದ ಆಹಾರವನ್ನು ನಮ್ಮ ದೈನಂದಿನ ಉಪಹಾರ, ಊಟದ ಪದ್ಧತಿಯಲ್ಲಿ ಅಳವಡಿಸಿಕೊಳ್ಳುವುದರಿಂದ ಆರೋಗ್ಯವಂತರಾಗಿ ಬದುಕಬಹುದೆಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು.

ಶುಕ್ರವಾರ(ಜ.17) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಕೃಷಿಕ ಸಮಾಜ, ಕೃಷಿ ಪರಿಕರ ಮಾರಾಟಗಾರರ ಸಂಘ, ತರಳಬಾಳು ಕೃಷಿ ವಿಜ್ಞಾನ ಕೇಂದ್ರ, ಇತರೆ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಿಲಾಗಿದ್ದ ಸಿರಿಧಾನ್ಯ ಮತ್ತು ಸಾವಯವ ಅಂತರಾಷ್ಟ್ರೀಯ ವಾಣಿಜ್ಯ ಮೇಳ  2025 ರ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ನಡಿಗೆ ಆರೋಗ್ಯದ ಕಡೆಗೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಿರಿಧಾನ್ಯಗಳಾದ ನವಣೆ, ಹಾರಕ, ಊದಲು, ಕೊರಲೆ, ಸಾಮೆ, ಬರಗು ಬಳಕೆಯಿಂದಾಗುವ




ಮಹತ್ವ ಕುರಿತು ಜಾಗೃತಿ ಹೆಚ್ಚಿದ್ದು ಸಿರಿಧಾನ್ಯ ಬಳಕೆಯೂ ಕೂಡ ಹೆಚ್ಚಾಗುತ್ತಿದೆ. ಈ ನಿಟ್ಟಿನಲ್ಲಿ ಸರ್ಕಾರ ವಿವಿಧ ಕಾರ್ಯಕ್ರಮಗಳ ಮುಖಾಂತರ ರೈತರಿಗೆ ಸಿರಿಧಾನ್ಯಗಳನ್ನು ಬೆಳೆಯಲು ಉತ್ತೇಜಿಸುತ್ತಿದೆ. ಸಿರಿಧಾನ್ಯಗಳಿಂದ ವಿವಿಧ ಖಾದ್ಯಗಳನ್ನು ತಯಾರಿಸುವ ಬಗೆಯ ಕುರಿತು ಜಾಗೃತಿ ಮೂಡಿಸಲು ಸಿರಿಧಾನ್ಯ ಪಾಕಸ್ಪರ್ಧೆ, ಸಿರಿಧಾನ್ಯ ಜಾಥಾ ಹಾಗೂ ಇದೇ ಜನವರಿ 23 ರಿಂದ 25 ರವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಂತರಾಷ್ಟ್ರೀಯ ವಾಣಿಜ್ಯ ಮೇಳ, ಸಾವಯವ ಮತ್ತು ಸಿರಿಧಾನ್ಯ ಮೇಳವನ್ನು ಆಯೋಜಿಸಲಾಗಿದ್ದು, ನಾವೆಲ್ಲರೂ ಇದರ ಸದುಪಯೋಗವನ್ನು ಪಡೆದುಕೊಳ್ಳೋಣ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಮಾತಾನಾಡಿ ಇತ್ತೀಚಿಗೆ ಜಂಕ್ ಫುಡ್ ಉಪಯೋಗಿಸುವುದರಿಂದ ಚಿಕ್ಕ ವಯಸ್ಸಿನಲ್ಲಿಯೇ ಆರೋಗ್ಯ ಕೆಡುತ್ತಲಿದೆ. ಸಿರಿಧಾನ್ಯಗಳ ಬಳಕೆಯಿಂದ ಆರೋಗ್ಯವನ್ನು ಸುಧಾರಿಸಿಕೊಳ್ಳಬಹುದು. ಇದರ ಬೆಳೆಯನ್ನು ಸಹ ಅತಿ ಕಡಿಮೆ ವೆಚ್ಚದಲ್ಲಿ ಬೆಳೆಯುಬಹುದಾಗಿದ್ದು, ಬೆಳೆದಂತಹ ರೈತರಿಗೆ ಸಹಾಯಧನವನ್ನು ನೀಡಲಾಗುತ್ತಿದೆ ಎಂದರು.

ಸಿರಿಧಾನ್ಯ ನಡಿಗೆ ಜಾಥಾ ನಗರದ ಜಯದೇವ ವೃತ್ತದಿಂದ ಪ್ರಾರಂಭವಾಗಿ ಪಿ.ಬಿ. ರಸ್ತೆ ಮುಖಾಂತರ, ಎ.ವಿ.ಕೆ. ಕಾಲೇಜು ರಸ್ತೆ, ರಾಂ& ಕೋ ವೃತ್ತ, ಚರ್ಚ್‌ರಸ್ತೆ ಮೂಲಕವಾಗಿ ಸಾಗಿ ಗುಂಡಿ ವೃತ್ತದಲ್ಲಿ ಮಾನವ ಸರಪಳಿ ರಚಿಸುವ ಮೂಲಕ ಮುಕ್ತಾಯಗೊಂಡಿತು.

ಜಾಥಾ ನಡಿಗೆ ಯುದ್ದಕ್ಕೂ ಸಿರಿಧಾನ್ಯ ಕುರಿತು ಘೋಷಣೆಗಳನ್ನು ಹಾಗೂ ಸಿರಿಧಾನ್ಯಕ್ಕೆ ಸಂಬಂಧಿಸಿದ ಹಾಡುಗಳು ಹಾಗೂ ಬಿತ್ತಿ ಚಿತ್ರಗಳು ಹಾಗೂ ಪತ್ರಗಳ ಮುಖಾಂತರ ಜಾಗೃತಿಯನ್ನು ಮೂಡಿಸಲಾಯಿತು.

ಜಂಟಿ ಕೃಷಿ ನಿರ್ದೇಶಕರಾದ ಶ್ರೀನಿವಾಸ್ ಚಿಂತಾಲ್, ತಹಶೀಲ್ದಾರ್ ಅಶ್ವಥ್, ತರಳಬಾಳು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು, ತೋಟಗಾರಿಕೆ ಉಪ ನಿರ್ದೇಶಕರು, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರುಗಳು, ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷರು ಕೃಷಿ ಅಧಿಕಾರಿಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ಸಿಬ್ಬಂದಿ ವರ್ಗದವರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T